ಸಂಪುಟ : 11 ಸಂಚಿಕೆ: 126 ಪುಟ : 4+2 ಬೆಲೆ: 3.00 ಶುಕ್ರವಾರ ಜೂನ್ 19 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ




ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ

Volume : 11 Issue : 126 Pages : 4+2 Price : 3.00 Friday june 19 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಅಡುಗೆ ಸಹಾಯಕ ಹುದ್ದೆಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಶಿರಹಟ್ಟಿ ಪಟ್ಟಣ ಪಂಚಾಯತಿ ವ್ಯಾಪ್ತಿಯ ಹರಿಪೂರ ಶಾಲೆ ಹಾಗೂ ಬಜಾರ ರಸ್ತೆ ಸರ್ಕಾರಿ ಗಂಡು ಮಕ್ಕಳ ಪ್ರಾಥಮಿಕ ಶಾಲೆಯಲ್ಲಿ ಖಾಲಿ ಇರುವ ಅಡುಗೆ ಸಹಾಯಕರ ಹುದ್ದೆಗಳ ಭರ್ತಿಗೆ ಅರ್ಹ ಮಹಿಳಾ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಹರಿಪೂರ ಶಾಲೆಯ ಹುದ್ದೆಗೆ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಮಹಿಳಾ ಅಭ್ಯರ್ಥಿಗಳಿಗೆ ಮೊದಲ ಆದ್ಯತೆ ನೀಡಲಾಗಿದ್ದು, ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ ಹಿಂದುಳಿದ ವರ್ಗದ ಮಹಿಳೆಯರ ಅರ್ಜಿಗಳನ್ನು ಪರಿಗಣಿಸಲಾಗುವುದು. ಬಜಾರ ರಸ್ತೆ ಶಾಲೆಯ ಹುದ್ದೆಗೆ ಸಾಮಾನ್ಯ ವರ್ಗದ ಮಹಿಳಾ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿ ಸಲ್ಲಿಸಲು ಜೂನ್ 24 ಕೊನೆಯ ದಿನವಾಗಿದ್ದು, ಹೆಚ್ಚಿನ ಮಾಹಿತಿಗಾಗಿ ಶಿರಹಟ್ಟಿ ಪಟ್ಟಣ ಪಂಚಾಯತಿ ಕಾರ್ಯಾಲಯವನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ಜೂ. 22ರಂದು ಒಂದು ದಿನದ ಉದ್ಯಮಶೀಲತಾ ಶಿಬಿರ

■ವಿಜಯಸಾಕ್ಷಿ ಸುದ್ದಿ, ಗದಗ

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಮತ್ತು ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ (ಸಿಡಾಕ್), ಧಾರವಾಡ ಇವರ ಸಹಯೋಗದಲ್ಲಿ ಸ್ವಂತ ಉದ್ಯೋಗ ಆರಂಭಿಸಲು ಆಸಕ್ತಿ ಹೊಂದಿರುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಪುರುಷ ಮತ್ತು ಮಹಿಳೆಯರಿಗಾಗಿ ಒಂದು ದಿನದ ಉದ್ಯಮಶೀಲತಾ ತಿಳುವಳಿಕೆ ಶಿಬಿರವನ್ನು ಆಯೋಜಿಸಲಾಗಿದೆ.

ಶಿಬಿರವು ಜೂನ್ 22ರಂದು ನಗರದ ಮಹೇಶ್ವರಿ ವಿವಿಧೋದ್ದೇಶ ಮಹಿಳಾ ಮಂಡಳದಲ್ಲಿ ನಡೆಯಲಿದ್ದು, ಉದ್ಯಮ ಆರಂಭಿಸುವ ಕುರಿತು ಅಗತ್ಯ ಮಾಹಿತಿ ಮತ್ತು ಮಾರ್ಗದರ್ಶನ ನೀಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಸಿಡಾಕ್ ಜಿಲ್ಲಾ ಕಚೇರಿ, ಜಿಲ್ಲಾ ಆಡಳಿತ ಭವನ, ರೂಂ ಸಂಖ್ಯೆ 106 ಅಥವಾ ದೂರವಾಣಿ ಸಂಖ್ಯೆ 7795855847 ಹಾಗೂ 8722759959 ಸಂಪರ್ಕಿಸಬಹುದು ಎಂದು ಸಿಡಾಕ್ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೂ.21ರ ಬಿ.ಕೆ. ಹರಿಪ್ರಸಾದ್ ಪದಗ್ರಹಣಕ್ಕೆ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ



ಕೆಪಿಸಿಸಿ ನೂತನ ಅಧ್ಯಕ್ಷರಾಗಿ ನೇಮಕಗೊಂಡಿರುವ ಬಿ.ಕೆ. ಹರಿಪ್ರಸಾದ್ ಅವರ ಜವಾಬ್ದಾರಿ ಸ್ವೀಕಾರ ಸಮಾರಂಭವು ಜೂನ್ 21ರಂದು ಬೆಂಗಳೂರಿನ ಅರಮನೆ ಮೈದಾನದ ತ್ರಿಪುರವಾಸಿನಿ ಆವರಣದಲ್ಲಿ ನಡೆಯಲಿದ್ದು, ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಗದಗ ಜಿಲ್ಲಾ ಪ್ರಚಾರ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ಮನವಿ ಮಾಡಿದ್ದಾರೆ.

ಕಾರ್ಯಕ್ರಮದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ರಾಜ್ಯದ ಪ್ರಮುಖ ಕಾಂಗ್ರೆಸ್ ನಾಯಕರು ಭಾಗವಹಿಸಲಿದ್ದಾರೆ ಎಂದು ಅವರು ತಿಳಿಸಿದ್ದಾರೆ.

ಜಿಲ್ಲೆಯ ಕಾಂಗ್ರೆಸ್ ಪದಾಧಿಕಾರಿಗಳು, ವಿವಿಧ ಘಟಕಗಳ ಮುಖಂಡರು, ಕಾರ್ಯಕರ್ತರು ಹಾಗೂ ಪಕ್ಷದ ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದ್ದಾರೆ.

## ಶಿರಹಟ್ಟಿ: ನಾಳೆ ವಿದ್ಯುತ್ ವ್ಯತ್ಯಯ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

110 ಕೆವ್ಹಿ ಶಿರಹಟ್ಟಿ ಉಪ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೊಳ್ಳಲಾಗುತ್ತಿರುವ ಹಿನ್ನೆಲೆಯಲ್ಲಿ ಜೂನ್ 20ರಂದು ಬೆಳಿಗ್ಗೆ 10ರಿಂದ ಸಂಜೆ 5.30ರವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ.

ಶಿರಹಟ್ಟಿ ಉಪಕೇಂದ್ರದಿಂದ ವಿದ್ಯುತ್ ಪಡೆಯುವ ನಗರ ಹಾಗೂ ಗ್ರಾಮೀಣ ಪ್ರದೇಶಗಳ ಎನ್‌ಜೆವೈ, ಇಐಪಿ, ಕುಡಿಯುವ ನೀರು, ಕೈಗಾರಿಕಾ, ಐಪಿಪಿ ಫೀಡರ್‌ಗಳು ಹಾಗೂ ಬಿಪಿಸಿಎಲ್-1, ಬಿಪಿಸಿಎಲ್-2 ಮತ್ತು ಎಲಿಶಿರೂರ ಗಾಳಿಯಂತ್ರ ಘಟಕಗಳಿಗೆ ಈ ಅವಧಿಯಲ್ಲಿ ವಿದ್ಯುತ್ ಪೂರೈಕೆ ಸ್ಥಗಿತಗೊಳ್ಳಲಿದೆ ಎಂದು ಪ್ರಕಟಣೆ ತಿಳಿಸಿದೆ.

### ಸಿಎಂ-ಕೆಪಿಸಿಸಿ ಅಧ್ಯಕ್ಷರೊಂದಿಗೆ ಕಾರ್ಯಕರ್ತರ ಮಾತುಕತೆ; ರಾಜಕೀಯ ವಲಯದಲ್ಲಿ ಜೋರಾದ ಚರ್ಚೆ!

# ಜಿ.ಎಸ್. ಪಾಟೀಲ ಸಚಿವರಾಗ್ತಾರಾ?

■ವಿಜಯಸಾಕ್ಷಿ ಸುದ್ದಿ, ರೋಣ

ರೋಣ ಕ್ಷೇತ್ರದ ಶಾಸಕ ಹಾಗೂ ಗದಗ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ದೊರೆಯಬಹುದೇ? ಎಂಬ ಪ್ರಶ್ನೆ ಇದೀಗ ಕಾಂಗ್ರೆಸ್ ವಲಯದಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿದೆ. ರೋಣ ಕ್ಷೇತ್ರಕ್ಕೆ ಸಚಿವ ಸಂಪುಟದಲ್ಲಿ ಪ್ರಾತಿನಿಧ್ಯ ನೀಡಬೇಕು ಎಂಬ ಆಗ್ರಹದ ಹಿನ್ನೆಲೆಯಲ್ಲಿ ನಡೆದ ಹೋರಾಟಗಳು ಹಾಗೂ ಇತ್ತೀಚಿನ ರಾಜಕೀಯ ಬೆಳವಣಿಗೆಗಳು ಈ ಚರ್ಚೆಗೆ ಮತ್ತಷ್ಟು ಬಲ ತುಂಬಿವೆ.

ಬಲ್ಲ ಮೂಲಗಳಿಂದ ತಿಳಿದು ಬಂದಿರುವ ಮಾಹಿತಿ ಪ್ರಕಾರ, ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ





ನೀಡುವಂತೆ ಕಾಂಗ್ರೆಸ್ ಕಾರ್ಯಕರ್ತರು ಸಲ್ಲಿಸಿರುವ ಮನವಿಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಹಾಗೂ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಸಕಾರಾತ್ಮಕವಾಗಿ ಸ್ಪಂದಿಸಿದ್ದು, ವಿಷಯವನ್ನು ಪಕ್ಷದ ಉನ್ನತ ಮಟ್ಟದ ನಾಯಕರ ಗಮನಕ್ಕೆ ತರುವ ಭರವಸೆ ನೀಡಿದ್ದಾರೆ ಎನ್ನಲಾಗಿದೆ.

ರೋಣ ಕ್ಷೇತ್ರಕ್ಕೆ ಸಾಮಾಜಿಕ ನ್ಯಾಯ ಒದಗಿಸಬೇಕು ಎಂಬ ಉದ್ದೇಶದಿಂದ ಕಾಂಗ್ರೆಸ್ ಕಾರ್ಯಕರ್ತರು ತುಮಕೂರಿನ ಸಿದ್ದಗಂಗಾ ಮಠದಿಂದ ಬೆಂಗಳೂರಿನವರೆಗೆ ಪಾದಯಾತ್ರೆ ನಡೆಸಿ ತಮ್ಮ ಬೇಡಿಕೆಯನ್ನು ಪಕ್ಷದ ನಾಯಕರ ಮುಂದಿಟ್ಟಿದ್ದರು. ಇದಕ್ಕೂ ಮುನ್ನ ಕ್ಷೇತ್ರದಲ್ಲಿ ಉರುಳು ಸೇವೆ, ದೀಡ ನಮಸ್ಕಾರ, ಪ್ರತಿಭಟನೆ, ದೇವಸ್ಥಾನ ಹಾಗೂ ಮಸೀದಿಗಳಲ್ಲಿ ವಿಶೇಷ ಪೂಜೆ ಸೇರಿದಂತೆ ವಿವಿಧ ರೀತಿಯ ಹೋರಾಟಗಳು ನಡೆದಿದ್ದವು.

ನಾಲ್ಕು ಬಾರಿ ಶಾಸಕರಾಗಿ ಆಯ್ಕೆಯಾಗಿರುವ ಜಿ.ಎಸ್. ಪಾಟೀಲರು ಕಾಂಗ್ರೆಸ್ ಪಕ್ಷದ ಸಂಘಟನೆಗೆ ಹಾಗೂ ಕ್ಷೇತ್ರದ ಅಭಿವೃದ್ಧಿಗೆ ನೀಡಿರುವ ಕೊಡುಗೆಯನ್ನು ಪರಿಗಣಿಸಿ ಸಚಿವ ಸಂಪುಟದಲ್ಲಿ ಸ್ಥಾನ ನೀಡಬೇಕು ಎಂಬುದು ಕಾರ್ಯಕರ್ತರ ಪ್ರಮುಖ ಆಗ್ರಹವಾಗಿದೆ. ಕಳೆದ ವಿಧಾನಸಭೆ ಚುನಾವಣೆಯ ನಂತರದಿಂದಲೇ ಈ ಬೇಡಿಕೆ ನಿರಂತರವಾಗಿ ಕೇಳಿಬರುತ್ತಿದೆ.

ಬಲ್ಲ ಮೂಲಗಳ ಪ್ರಕಾರ, ಕೆಪಿಸಿಸಿ ಕಚೇರಿಯಲ್ಲಿ ನಡೆದ ಭೇಟಿಯ ವೇಳೆ ಕಾರ್ಯಕರ್ತರ ಮನವಿಯನ್ನು ಆಲಿಸಿದ ನಾಯಕರು, ಜಿ.ಎಸ್. ಪಾಟೀಲರ ಸಂಘಟನಾ ಅನುಭವ ಹಾಗೂ ಪಕ್ಷದ ಮೇಲಿನ ನಿಷ್ಠೆಯನ್ನು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ ಎನ್ನಲಾಗಿದೆ. ಆದರೆ ಸಚಿವ ಸಂಪುಟ ವಿಸ್ತರಣೆ ಹಾಗೂ ಸಚಿವ ಸ್ಥಾನ ಹಂಚಿಕೆ ಕುರಿತ ಅಂತಿಮ ನಿರ್ಧಾರವನ್ನು ಪಕ್ಷದ ಹೈಕಮಾಂಡ್ ಕೈಗೊಳ್ಳಬೇಕಿರುವುದರಿಂದ ಅಧಿಕೃತ ಘೋಷಣೆ ಹೊರಬೀಳುವವರೆಗೂ ಕಾದು ನೋಡಬೇಕಾಗಿದೆ.

ಈ ಬೆಳವಣಿಗೆಯಿಂದ ಜಿ.ಎಸ್. ಪಾಟೀಲ ಬೆಂಬಲಿಗರಲ್ಲಿ ಹೊಸ ಆಶಾಭಾವನೆ ಮೂಡಿದ್ದು, ಮುಂಬರುವ ಸಚಿವ ಸಂಪುಟ ವಿಸ್ತರಣೆಯಲ್ಲಿ ರೋಣ ಕ್ಷೇತ್ರಕ್ಕೆ ಪ್ರಾತಿನಿಧ್ಯ ದೊರೆಯುವ ನಿರೀಕ್ಷೆ ಹೆಚ್ಚಾಗಿದೆ. ರಾಜಕೀಯ ವಲಯದಲ್ಲೂ ಈ ಕುರಿತು ಚರ್ಚೆಗಳು ಜೋರಾಗಿವೆ.

**ಹೈಕಮಾಂಡ್ ಅಂಗಳದಲ್ಲಿ ಚರ್ಚೆ?**

"ರೋಣ ಕ್ಷೇತ್ರಕ್ಕೆ ಸಚಿವ ಸಂಪುಟದಲ್ಲಿ ಪ್ರಾತಿನಿಧ್ಯ ಸಿಗಬೇಕು ಎಂಬುದು ಕಾರ್ಯಕರ್ತರ ಒಕ್ಕೊರಲಿನ ಆಗ್ರಹ. ಈ ಬೇಡಿಕೆಗೆ ಕಾಂಗ್ರೆಸ್ ವರಿಷ್ಠರಿಂದ ಸಕಾರಾತ್ಮಕ ಸ್ಪಂದನೆ ವ್ಯಕ್ತವಾಗಿದೆ ಎಂದು ಮೂಲಗಳು ತಿಳಿಸಿವೆ."

### ಮೊಹರಂ ಹಬ್ಬದ ಅಂಗವಾಗಿ ಶಾಂತಿ ಸಭೆ; ಭದ್ರತೆ ಒದಗಿಸುವ ಭರವಸೆ

# ಶಾಂತಿ-ಸೌಹಾರ್ದದಿಂದ ಮೊಹರಂ ಆಚರಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಹಿಂದೂ-ಮುಸ್ಲಿಂ ಭಾವೈಕ್ಯತೆಯ ಪ್ರತೀಕವಾಗಿರುವ ಲಕ್ಷ್ಮೇಶ್ವರ ಪಟ್ಟಣದಲ್ಲಿ ಮೊಹರಂ ಹಬ್ಬವನ್ನು ಶಾಂತಿ, ಸೌಹಾರ್ದ ಮತ್ತು ಸಹೋದರತೆಯ ಮನೋಭಾವದಿಂದ ಆಚರಿಸಬೇಕು ಎಂದು ಪಿಎಸ್‌ಐ ನಾಗರಾಜ ಗಡದ ಹೇಳಿದರು.

ಪಟ್ಟಣದ ಪೊಲೀಸ್ ಠಾಣೆಯಲ್ಲಿ ಮೊಹರಂ ಹಬ್ಬದ ಪ್ರಯುಕ್ತ ಆಯೋಜಿಸಿದ್ದ ಶಾಂತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪಟ್ಟಣದಲ್ಲಿ ಹಲವು ದಶಕಗಳಿಂದ ಹಿಂದೂ ಹಾಗೂ ಮುಸ್ಲಿಂ ಸಮುದಾಯದವರು ಸಹೋದರ ಭಾವದಿಂದ ಮೊಹರಂ ಆಚರಿಸುತ್ತಾ ಬಂದಿದ್ದು, ಈ ಬಾರಿಯೂ ಶಾಂತಿಯುತವಾಗಿ ಹಬ್ಬ ಆಚರಿಸಬೇಕು. ಹಬ್ಬದ ಸಂದರ್ಭದಲ್ಲಿ ಅಗತ್ಯ ಪೊಲೀಸ್ ಭದ್ರತೆ ಒದಗಿಸಲಾಗುವುದು. ಸಮಾಜದಲ್ಲಿ ನೆಮ್ಮದಿ ಮತ್ತು ಸೌಹಾರ್ದ ವಾತಾವರಣ ನಿರ್ಮಾಣವಾಗಲು ಎಲ್ಲರೂ ಸಹಕರಿಸಬೇಕು ಎಂದು ಮನವಿ ಮಾಡಿದರು.

ಹಬ್ಬದ ಹೆಸರಿನಲ್ಲಿ ಶಾಂತಿಗೆ ಭಂಗ ತರುವವರ







ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದ ಅವರು, ಸಂಚಾರ ನಿಯಮ ಉಲ್ಲಂಘನೆ ಪ್ರಕರಣಗಳ ಇ-ಚಲನ್ ದಂಡ ಪಾವತಿಗೆ ರಾಜ್ಯ ಸರ್ಕಾರ ಘೋಷಿಸಿರುವ ಶೇ.50 ರಿಯಾಯಿತಿಯ ಪ್ರಯೋಜನ ಪಡೆದುಕೊಳ್ಳುವಂತೆ ಸಾರ್ವಜನಿಕರಿಗೆ ಸಲಹೆ ನೀಡಿದರು. ಜೂನ್ 21ರಿಂದ ಜುಲೈ 10ರವರೆಗೆ ಈ ಸೌಲಭ್ಯ ಲಭ್ಯವಿರಲಿದೆ ಎಂದರು.

ಶಿಗ್ಲಿ ಕ್ರಾಸ್‌ನಲ್ಲಿ ಹೆಚ್ಚುತ್ತಿರುವ ವಾಹನ ದಟ್ಟಣೆಯನ್ನು ನಿಯಂತ್ರಿಸಲು ಟ್ರಾಫಿಕ್ ಸಿಗ್ನಲ್ ಅಳವಡಿಸುವ ಕುರಿತು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಸಾರ್ವಜನಿಕರ ಪರವಾಗಿ ಪೂರ್ಣಾಜಿ ಕರಾಟೆ, ಗಂಗಾಧರ ಮೆಣಸಿನಕಾಯಿ, ಎಂ.ಐ. ಮುಳಗುಂದ, ಅಮರೀಶ ತೆಂಬದಮನಿ ಹಾಗೂ ಬಸವರಾಜ ಕಲ್ಲೂರ ಮಾತನಾಡಿದರು.

ಸಭೆಯಲ್ಲಿ ಸುಲೇಮಾನಸಾಬ್ ಕಣಕೆ, ಅಬ್ದುಲಸಾಬ್ ಬೆಟಗೇರಿ, ಎಂ.ಎಚ್. ಶಮಲೆವಾಲೆ, ಭೀಮಣ್ಣ ಯಂಗಾಡಿ, ಮರಿಯಪ್ಪ ಭಜಂತ್ರಿ, ಅಕ್ಬರಸಾಬ್ ಸುಂಡಕೆ, ಮಲ್ಲಿಕಾರ್ಜುನ ವಾರದ, ಡಿ.ಬಿ. ಫಕ್ಕೀರಪ್ಪ, ಮುತ್ತಣ್ಣ ಪೂಜಾರ, ಜಾಫರ್ ಲಕ್ಷ್ಮೇಶ್ವರ, ಖಾಜಾಪೀರ ಜಮಖಂಡಿ, ನೂರಅಹ್ಮದ ಶಿದ್ದಿ, ಮಂಜಪ್ಪ ವಡ್ಡರ, ದಾದಾಪೀರ ತಂಬಾಕ, ಇರ್ಫಾನ ಮಿರ್ಜಾ, ಮುತ್ತು ನೀರಲಗಿ ಸೇರಿದಂತೆ ಹಿಂದೂ-ಮುಸ್ಲಿಂ ಸಮುದಾಯದ ಮುಖಂಡರು ಉಪಸ್ಥಿತರಿದ್ದರು. ಪ್ರಕಾಶ ಮ್ಯಾಗೇರಿ ನಿರೂಪಿಸಿದರು.

"ಹಬ್ಬಗಳು ಜನರನ್ನು ಒಗ್ಗೂಡಿಸುವ ಸೇತುವೆಗಳಾಗಬೇಕು, ಶಾಂತಿ ಮತ್ತು ಸೌಹಾರ್ದಕ್ಕೆ ಧಕ್ಕೆ ತರುವ ಯಾವುದೇ ಕೃತ್ಯವನ್ನು ಸಹಿಸುವುದಿಲ್ಲ."

**– ನಾಗರಾಜ ಗಡದ,** ಪಿಎಸ್‌ಐ, ಲಕ್ಷ್ಮೇಶ್ವರ

### ರಾಸಾಯನಿಕ ಗೊಬ್ಬರದ ಅತಿಬಳಕೆ ಅಪಾಯ; ಸಾವಯವ ಕೃಷಿಯತ್ತ ಮುಖ ಮಾಡುವಂತೆ ಸಲಹೆ

# ಮಣ್ಣು ಉಳಿದರೆ ಕೃಷಿ ಉಳಿಯುತ್ತದೆ

■ವಿಜಯಸಾಕ್ಷಿ ಸುದ್ದಿ, ರೋಣ

ರಾಸಾಯನಿಕ ಗೊಬ್ಬರಗಳ ಅತಿಯಾದ ಬಳಕೆಯಿಂದ ಭೂಮಿ ತನ್ನ ಫಲವತ್ತತೆಯನ್ನು ಕಳೆದುಕೊಳ್ಳುತ್ತಿದ್ದು, ರೈತರು ಮಣ್ಣಿನ ಆರೋಗ್ಯ ಕಾಪಾಡಲು ಸಾವಯವ ಕೃಷಿಯತ್ತ ಹೆಚ್ಚಿನ ಒಲವು ತೋರಬೇಕು ಎಂದು ಜಿಲ್ಲಾ ಜಂಟಿ ಕೃಷಿ ನಿರ್ದೇಶಕಿ ಚೇತನಾ ಪಾಟೀಲ ಹೇಳಿದರು.

ಸಮೀಪದ ಮಾರನಬಸರಿ ಗ್ರಾಮದ ಕೃಷಿ ಪತ್ತಿನ ಸಹಕಾರಿ ಸಂಘದ ಆವರಣದಲ್ಲಿ ಕೃಷಿ ಇಲಾಖೆ ಗದಗ, ರೋಣ ಹಾಗೂ ಹುಲಕೋಟಿ ಕೃಷಿ ವಿಜ್ಞಾನ ಕೇಂದ್ರದ ಸಹಯೋಗದಲ್ಲಿ ಗುರುವಾರ ಆಯೋಜಿಸಿದ್ದ 'ಖೇತ್ ಬಚಾವೋ ಅಭಿಯಾನ' ಅರಿವು ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ರಾಸಾಯನಿಕ ಗೊಬ್ಬರಗಳ ಬಳಕೆ ಹೆಚ್ಚಾಗುತ್ತಿದ್ದು, ಇದು ಮಣ್ಣಿನ ಫಲವತ್ತತೆ ಮಾತ್ರವಲ್ಲದೆ ಮಾನವ ಆರೋಗ್ಯದ ಮೇಲೂ ದುಷ್ಪರಿಣಾಮ ಬೀರುತ್ತಿದೆ. ಉತ್ತಮ ಇಳುವರಿ ಪಡೆಯಲು ಮಣ್ಣಿನ ಗುಣಮಟ್ಟ ಕಾಪಾಡುವುದು ಅತ್ಯಗತ್ಯ ಎಂದು ಹೇಳಿದರು.

ರೈತರು ಬಿತ್ತನೆಗೂ ಮುನ್ನ ಮಣ್ಣಿನ ಪರೀಕ್ಷೆ ಮಾಡಿಸಿಕೊಳ್ಳಬೇಕು. ಇದರಿಂದ ಜಮೀನಿಗೆ ಸೂಕ್ತವಾದ ಬೆಳೆಗಳ ಆಯ್ಕೆ ಸಾಧ್ಯವಾಗುವುದರ ಜೊತೆಗೆ ಅನಗತ್ಯ ನಷ್ಟವನ್ನು ತಪ್ಪಿಸಬಹುದು ಎಂದು ತಿಳಿಸಿದರು.




"ಮಣ್ಣಿನ ಫಲವತ್ತತೆ ಉಳಿಸಿಕೊಳ್ಳುವುದು ರೈತರ ಮೊದಲ ಕರ್ತವ್ಯ. ಬಿತ್ತನೆಗೂ ಮುನ್ನ ಬೀಜೋಪಚಾರ ಮಾಡಿ, ಸದ್ಯಕ್ಕೆ ಎಡೆ ಹೊಡೆಯುವುದನ್ನು ತಪ್ಪಿಸಿ. ಸಾವಯವ ಗೊಬ್ಬರ ಬಳಕೆಯಿಂದಲೇ ಭೂಮಿಯ ಆರೋಗ್ಯ ಕಾಪಾಡಲು ಸಾಧ್ಯ."

**– ಚೇತನಾ ಪಾಟೀಲ,** ಜಿಲ್ಲಾ ಜಂಟಿ ಕೃಷಿ ನಿರ್ದೇಶಕಿ

ಮುಂಗಾರು ಹಂಗಾಮಿನ ಬೆಳೆಗಳ ಬಿತ್ತನೆ ಈಗಾಗಲೇ ನಡೆದಿದ್ದು, ನಿರೀಕ್ಷಿತ ಪ್ರಮಾಣದಲ್ಲಿ ಮಳೆಯಾಗದ ಹಿನ್ನೆಲೆಯಲ್ಲಿ ರೈತರು ಎಚ್ಚರಿಕೆಯಿಂದ ಕೃಷಿ ಚಟುವಟಿಕೆಗಳನ್ನು ಕೈಗೊಳ್ಳಬೇಕು. ವಿಶೇಷವಾಗಿ ಹೆಸರು ಬೆಳೆಗಳಲ್ಲಿ ಸದ್ಯಕ್ಕೆ ಎಡೆ ಹೊಡೆಯುವುದರಿಂದ ಮಣ್ಣಿನ ತೇವಾಂಶ ಕಡಿಮೆಯಾಗುವ ಸಾಧ್ಯತೆ ಇರುವುದರಿಂದ ಅದನ್ನು ತಪ್ಪಿಸಬೇಕು ಎಂದು ಸಲಹೆ ನೀಡಿದರು.

ಬಿತ್ತನೆಗೂ ಮುನ್ನ ಬೀಜೋಪಚಾರ ಕಡ್ಡಾಯವಾಗಿ ಮಾಡಬೇಕು. ಇದರಿಂದ ರೋಗ ನಿರೋಧಕ ಶಕ್ತಿ ಹೆಚ್ಚುವುದರ ಜೊತೆಗೆ ಉತ್ತಮ ಮೊಳಕೆ ಮತ್ತು ಬೆಳವಣಿಗೆ ಸಾಧ್ಯವಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಜಯಪ್ರಕಾಶ ಪಾಟೀಲ, ರೈತರು ಆರಂಭದಲ್ಲಿ ಕನಿಷ್ಠ ಒಂದು ಎಕರೆ ಜಮೀನಿನಲ್ಲಿ ಸಾವಯವ ಗೊಬ್ಬರ ಬಳಸಿ ಅದರ ಪರಿಣಾಮವನ್ನು ಗಮನಿಸಬೇಕು. ಕೃಷಿ ಹೊಂಡಗಳ ನಿರ್ಮಾಣದ ಮೂಲಕ ಮಳೆನೀರನ್ನು ಸಂಗ್ರಹಿಸಿ, ನೀರಿನ ಸಮರ್ಪಕ ಬಳಕೆ ಹಾಗೂ ಬೆಳೆ ಆಯ್ಕೆಯಲ್ಲಿ ಕೃಷಿ ಇಲಾಖೆಯ ಸಲಹೆ ಪಡೆಯಬೇಕು ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕೃಷಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ಅಂದಾನಗೌಡ ಪಾಟೀಲ ವಹಿಸಿದ್ದರು. ವಿವಿಧ ರೈತ ಸಂಪರ್ಕ ಕೇಂದ್ರಗಳ ಅಧಿಕಾರಿಗಳು, ಸಿಬ್ಬಂದಿ ಹಾಗೂ ರೈತರು ಉಪಸ್ಥಿತರಿದ್ದರು.

### ಗದಗ ಜಿಲ್ಲೆಯ ಇಬ್ಬರು ಹಿರಿಯ ನಾಯಕರಿಗೆ ಸಚಿವ ಸಂಪುಟದಲ್ಲಿ ಸ್ಥಾನ ಕಲ್ಪಿಸಲು ಯುವ ಕಾಂಗ್ರೆಸ್ ಆಗ್ರಹ

# ಎಚ್.ಕೆ.ಗೆ ಡಿಸಿಎಂ, ಜಿ.ಎಸ್.ಗೆ ಸಚಿವ ಸ್ಥಾನ ನೀಡಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಮಾಜಿ ಸಚಿವ ಎಚ್.ಕೆ. ಪಾಟೀಲ ಅವರನ್ನು ಉಪಮುಖ್ಯಮಂತ್ರಿಯನ್ನಾಗಿ ಹಾಗೂ ರೋಣ ಶಾಸಕ, ಗದಗ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಜಿ.ಎಸ್. ಪಾಟೀಲ ಅವರನ್ನು ಸಚಿವ ಸಂಪುಟಕ್ಕೆ ಸೇರ್ಪಡೆ ಮಾಡಿಕೊಳ್ಳಬೇಕು ಎಂದು ಲಕ್ಷ್ಮೇಶ್ವರ ತಾಲೂಕು ಯುವ ಕಾಂಗ್ರೆಸ್ ಅಧ್ಯಕ್ಷ ರಾಹುಲ್ ಬಸವರಾಜ ಹೊಳಲಾಪೂರ ಮುಖ್ಯಮಂತ್ರಿ ಅವರಿಗೆ ಮನವಿ ಮಾಡಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಗದಗ ಜಿಲ್ಲೆಯಲ್ಲಿ ಕಾಂಗ್ರೆಸ್ ಪಕ್ಷದ ಬೆಳವಣಿಗೆಗೆ ಎಚ್.ಕೆ. ಪಾಟೀಲ ಹಾಗೂ ಜಿ.ಎಸ್. ಪಾಟೀಲ ಇಬ್ಬರೂ ಮಹತ್ವದ ಕೊಡುಗೆ ನೀಡಿದ್ದಾರೆ. ಇವರಿಗೆ ಸಚಿವ ಸಂಪುಟದಲ್ಲಿ ಸೂಕ್ತ ಸ್ಥಾನಮಾನ ನೀಡುವುದರಿಂದ ಜಿಲ್ಲೆಯಲ್ಲಿ ಕಾಂಗ್ರೆಸ್ ಪಕ್ಷ ಮತ್ತಷ್ಟು ಬಲಗೊಳ್ಳಲಿದ್ದು, ಸಂಘಟನೆಯ ಶಕ್ತಿಯೂ ವೃದ್ಧಿಯಾಗಲಿದೆ ಎಂದು ತಿಳಿಸಿದ್ದಾರೆ.

ಎಚ್.ಕೆ. ಪಾಟೀಲ ಅವರು ಮುತ್ಸದ್ದಿ, ಅಧ್ಯಯನಶೀಲ ಹಾಗೂ ಕಳಂಕರಹಿತ ರಾಜಕಾರಣಿಯಾಗಿ ರಾಜ್ಯದಲ್ಲಿ ವಿಶಿಷ್ಟ ಹೆಸರನ್ನು ಗಳಿಸಿದ್ದಾರೆ. ಮತ್ತೊಂದೆಡೆ, ಜಿ.ಎಸ್. ಪಾಟೀಲ ಅವರು ಜನಸೇವೆ ಹಾಗೂ ಪಕ್ಷ ಸಂಘಟನೆಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದು, ಗದಗ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಾಗಿ ಪಕ್ಷವನ್ನು ಬಲಪಡಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ ಎಂದು ಹೇಳಿದ್ದಾರೆ.

ರಾಜ್ಯದ ಎರಡನೇ ಹಂತದ ಸಚಿವ ಸಂಪುಟ ವಿಸ್ತರಣೆಯಲ್ಲಿ ಈ ಇಬ್ಬರು ನಾಯಕರಿಗೂ ಅವಕಾಶ ದೊರೆಯುವ ವಿಶ್ವಾಸ ಕಾರ್ಯಕರ್ತರಲ್ಲಿ ಇದೆ. ವಿಶೇಷವಾಗಿ "ಸಾವಿರ ಕೆರೆಗಳ ಸರದಾರ" ಎಂದು ಹೆಸರಾಗಿರುವ ಜಿ.ಎಸ್. ಪಾಟೀಲ ಅವರಿಗೆ ಸಚಿವ ಸ್ಥಾನ ನೀಡುವ ಮೂಲಕ ಉತ್ತರ ಕರ್ನಾಟಕಕ್ಕೆ ಸಮರ್ಪಕ ಪ್ರಾತಿನಿಧ್ಯ ಕಲ್ಪಿಸಬೇಕು ಎಂದು ಒತ್ತಾಯಿಸಿದ್ದಾರೆ.

"ಎಚ್.ಕೆ. ಪಾಟೀಲರ ಅನುಭವ ಮತ್ತು ಜಿ.ಎಸ್. ಪಾಟೀಲರ ಸಂಘಟನಾ ಸಾಮರ್ಥ್ಯವನ್ನು ಸರ್ಕಾರ ಬಳಸಿಕೊಳ್ಳಬೇಕು. ಇಬ್ಬರಿಗೂ ಸಚಿವ ಸಂಪುಟದಲ್ಲಿ ಸ್ಥಾನ ನೀಡಿದರೆ ಕಾಂಗ್ರೆಸ್ ಪಕ್ಷಕ್ಕೆ ಮತ್ತಷ್ಟು ಬಲ ಬರಲಿದೆ."

**– ರಾಹುಲ್ ಬಸವರಾಜ ಹೊಳಲಾಪೂರ,** ಅಧ್ಯಕ್ಷರು, ಲಕ್ಷ್ಮೇಶ್ವರ ತಾಲೂಕು ಯುವ ಕಾಂಗ್ರೆಸ್

# ಸ್ಪಾ-ಸಲೂನ್‌ಗಳ ಮೇಲೆ ಪೊಲೀಸರ ದಾಳಿ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದಲ್ಲಿನ ವಿವಿಧ ಸ್ಪಾ ಹಾಗೂ ಸಲೂನ್‌ಗಳಲ್ಲಿ ಇಂದು ಪೊಲೀಸರು ದಿಢೀರ್ ತಪಾಸಣೆ ನಡೆಸಿ, ಅಗತ್ಯ ಪರವಾನಗಿ ಹಾಗೂ ದಾಖಲೆಗಳ ಪರಿಶೀಲನೆ ನಡೆಸಿದರು.

ಕಾನೂನುಬಾಹಿರ ಚಟುವಟಿಕೆಗಳಿಗೆ ಕಡಿವಾಣ ಹಾಕುವುದು ಹಾಗೂ ಸಂಸ್ಥೆಗಳು ನಿಯಮಾನುಸಾರ ಕಾರ್ಯನಿರ್ವಹಿಸುತ್ತಿರುವುದನ್ನು ಖಚಿತಪಡಿಸಿಕೊಳ್ಳುವ ಉದ್ದೇಶದಿಂದ ಈ ಕಾರ್ಯಾಚರಣೆ ಕೈಗೊಳ್ಳಲಾಯಿತು. ತಪಾಸಣೆ ವೇಳೆ ಹಲವು ಸಂಸ್ಥೆಗಳಲ್ಲಿ ಅಗತ್ಯ ದಾಖಲೆಗಳು, ಪರವಾನಗಿಗಳು ಹಾಗೂ ಕಾನೂನುಬದ್ಧ ಅನುಮತಿಗಳ ಕೊರತೆ ಕಂಡುಬಂದ ಹಿನ್ನೆಲೆಯಲ್ಲಿ ಸಂಬಂಧಿತ ಸಂಸ್ಥೆಗಳಿಗೆ ದಾಖಲೆಗಳನ್ನು ಸಲ್ಲಿಸುವಂತೆ ಸೂಚಿಸಲಾಗಿದೆ.

ಎಲ್ಲಾ ಕಡ್ಡಾಯ ಅನುಮತಿಗಳು ಮತ್ತು ಅಗತ್ಯ ದಾಖಲೆಗಳನ್ನು ಒದಗಿಸುವವರೆಗೆ ಕೆಲವು ಸಂಸ್ಥೆಗಳ ಕಾರ್ಯಾಚರಣೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸುವಂತೆ ಸೂಚಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಸಂಸ್ಥೆಗಳ ಕುರಿತು ನಗರಸಭೆ, ಹೆಸ್ಕಾಂ, ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆ ಹಾಗೂ ಆರೋಗ್ಯ ಇಲಾಖೆಗೆ ಪತ್ರ ಬರೆದು ವ್ಯಾಪಾರ ಪರವಾನಗಿ, ವಿದ್ಯುತ್ ಸಂಪರ್ಕ, ಅಗ್ನಿ ಸುರಕ್ಷತೆ ಹಾಗೂ ಆರೋಗ್ಯ ಮಾನದಂಡಗಳ ಕುರಿತು ಪರಿಶೀಲನೆ ನಡೆಸುವಂತೆ ಕೋರಲಾಗುವುದು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ತಿಳಿಸಿದ್ದಾರೆ.

ಇದಲ್ಲದೆ, ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ ಕಾಯ್ದೆ (ಕೆಪಿಎಂಇ) ಅಡಿಯಲ್ಲಿ ಅಗತ್ಯ ಪರವಾನಗಿ ಮತ್ತು ನೋಂದಣಿಗಳನ್ನು ಹೊಂದಿರುವ ಬಗ್ಗೆ ಕೂಡ ಪರಿಶೀಲನೆ ನಡೆಸಲಾಗುತ್ತಿದೆ. ಸಂಬಂಧಿತ ಇಲಾಖೆಗಳ ವರದಿ ಹಾಗೂ ದಾಖಲೆಗಳ ಪರಿಶೀಲನೆ ಪೂರ್ಣಗೊಂಡ ಬಳಿಕ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಹೇಳಿದ್ದಾರೆ.

ನಗರದಲ್ಲಿನ ಎಲ್ಲಾ ಸ್ಪಾ ಹಾಗೂ ಸಲೂನ್‌ಗಳು ಕಾನೂನುಬದ್ಧ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಎಸ್ಪಿ ಎಚ್ಚರಿಕೆ ನೀಡಿದ್ದಾರೆ.

ಕಾರ್ಯಾಚರಣೆಯಲ್ಲಿ ಡಿವೈಎಸ್ಪಿ ಮುರ್ತುಜಾ ಖಾದ್ರಿ, ಗ್ರಾಮೀಣ ಪೊಲೀಸ್ ಇನ್ಸ್‌ಪೆಕ್ಟರ್ ಸಿದ್ದರಾಮೇಶ್ವರ ಸೇರಿದಂತೆ ವಿವಿಧ ಠಾಣೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಭಾಗವಹಿಸಿದ್ದರು.

**ಎಚ್.ಕೆ. ಪಾಟೀಲರ ಸಾಧನೆಯ ಹಿನ್ನೋಟ ಮತ್ತು ಸಚಿವ ಸಂಪುಟದಲ್ಲಿ ಸ್ಥಾನ ನೀಡಬೇಕೆಂಬ ಅಭಿಮಾನಿಗಳ ಆಶಯ**

# ಹೆಚ್.ಕೆ. ಪಾಟೀಲರಿಲ್ಲದ ಸಂಪುಟ ಎಂದರೆ ಅಲ್ಲಮಪ್ರಭು ಇಲ್ಲದ ಅನುಭವ ಮಂಟಪ!

ಕರ್ನಾಟಕ ಕಂಡ ಮುತ್ಸದ್ದಿ, ಸುಸಂಸ್ಕೃತ, ಅಧ್ಯಯನಶೀಲ, ಸಂವೇದನಾಶೀಲ ಹಾಗೂ ಪ್ರಜೆಗಳ ಅಂತರಂಗದ ತಂತುಗಳನ್ನು ಬಲ್ಲ ಅಪರೂಪದ ರಾಜಕಾರಣಿಗಳಲ್ಲಿ ಡಾ. ಎಚ್.ಕೆ. ಪಾಟೀಲರು ಒಬ್ಬರು. ಅವರಿಲ್ಲದ ಸಚಿವ ಸಂಪುಟವು ಅಲ್ಲಮಪ್ರಭು ಇಲ್ಲದ ಅನುಭವ ಮಂಟಪದಂತಾಗುತ್ತದೆ ಎಂಬುದು ಅವರ ಅಭಿಮಾನಿ ಬಳಗದ ಒಕ್ಕೊರಿನ ಅಭಿಪ್ರಾಯವಾಗಿದೆ. ಜೂನ್ 16ರಂದು ಗದಗದಲ್ಲಿ ನಡೆದ ವಿಭಿನ್ನ ಹೋರಾಟವು ಕೇವಲ ಬೇಡಿಕೆಯಲ್ಲ, ಪಕ್ಷದ ಹೈಕಮಾಂಡ್ ವಿರುದ್ಧದ ಸಾತ್ವಿಕ ಸಿಟ್ಟಿನ ಅಭಿವ್ಯಕ್ತಿಯೂ ಆಗಿತ್ತು.



ನಾಡಿನ ಏಳ್ಗೆಗಾಗಿ ಮಾನವೀಯ ಮೌಲ್ಯಗಳೊಂದಿಗೆ ಕೆಲಸ ಮಾಡಿರುವ ಎಚ್.ಕೆ. ಪಾಟೀಲರು ಸದನದ ಒಳಗೆ ಮತ್ತು ಹೊರಗೆ ಆಡಳಿತದ ಗುಣಮಟ್ಟ ಹೆಚ್ಚಿಸುವ ಅನೇಕ ವಿಚಾರಗಳನ್ನು ಮಂಡಿಸಿದ್ದಾರೆ. ಅವರ ಚಿಂತನೆ ಮತ್ತು ಕಾರ್ಯವೈಖರಿಗೆ ವಿರೋಧ ಪಕ್ಷದವರೂ ಮೆಚ್ಚುಗೆ ವ್ಯಕ್ತಪಡಿಸಿರುವುದು ಗಮನಾರ್ಹ.

ಬೃಹತ್ ನೀರಾವರಿ ಸಚಿವರಾಗಿ ಕೃಷ್ಣಾ ಕಣಿವೆ ಯೋಜನೆಯ ಅನುಷ್ಠಾನಕ್ಕೆ ವೇಗ ನೀಡಿದ ಅವರು, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರಾಗಿ ಕರ್ನಾಟಕದ ವಿವಿಧ ಕಾನೂನುಗಳನ್ನು ಒಟ್ಟುಗೂಡಿಸುವ ಮಹತ್ವದ ಕಾರ್ಯ ಕೈಗೊಂಡರು. ಪ್ರಾದೇಶಿಕ ಅಸಮಾನತೆ ನಿವಾರಣೆಗೆ ಬೆಳಗಾವಿ ಮತ್ತು ಕಲಬುರಗಿಯಲ್ಲಿ ವಿಶೇಷ ಅಧಿವೇಶನ ನಡೆಸಲು ಕಾರಣಕರ್ತರಾಗಿದ್ದರು.

ಭಾರತದ ಮಾಜಿ ರಾಷ್ಟ್ರಪತಿ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ಅವರನ್ನು ಕರ್ನಾಟಕ ವಿಧಾನಮಂಡಲದ ಉಭಯ ಸದನಗಳ ಸದಸ್ಯರನ್ನು ಉದ್ದೇಶಿಸಿ ಮಾತನಾಡಲು ಆಹ್ವಾನಿಸುವ ಕಾರ್ಯಕ್ರಮದ ಸಂಘಟನೆಯಲ್ಲಿ ಅವರು ಪ್ರಮುಖ ಪಾತ್ರವಹಿಸಿದ್ದರು. ಅದೇ ಸಂದರ್ಭದಲ್ಲಿ ಕಲಾಂ ಅವರ 11 ಅಂಶಗಳ ಅಭಿವೃದ್ಧಿ ಯೋಜನೆ ಜಾರಿಗೆ ಮುಂದಾಗಿದ್ದ ಕ್ರಮ ಇಂದಿಗೂ ಸ್ಮರಣೀಯವಾಗಿದೆ.

ಕರ್ನಾಟಕ ಕಾನೂನು ವಿಶ್ವವಿದ್ಯಾಲಯ, ಕರ್ನಾಟಕ ಕಾನೂನು ಆಯೋಗ, ಮಾನವ ಹಕ್ಕುಗಳ ಆಯೋಗ ಹಾಗೂ ಕಾನೂನು ಮತ್ತು ಸಂಸದೀಯ ಸುಧಾರಣಾ ಸಂಸ್ಥೆಗಳಂತಹ ಮಹತ್ವದ ಸಂಸ್ಥೆಗಳ ಸ್ಥಾಪನೆಯ ಶ್ರೇಯಸ್ಸು ಕೂಡ ಅವರಿಗೇ ಸಲ್ಲುತ್ತದೆ. ನ್ಯಾಯಾಂಗ ಇಲಾಖೆ ನೌಕರರ ರಾಜ್ಯ ಮಟ್ಟದ 8ನೇ ಸಮಾವೇಶದಲ್ಲಿ ಸಂಘ ಸಲ್ಲಿಸಿದ್ದ ಹಲವು ಮನವಿಗಳು ಕಾರ್ಯರೂಪಕ್ಕೆ ಬರಲು ಅವರು ನೆರವಾಗಿದ್ದರು.


ಶುದ್ಧ ಕುಡಿಯುವ ನೀರಿನ ಯೋಜನೆ ಹಾಗೂ "ಪ್ರಜೆಗಳೆಡೆ ಪ್ರಜಾಪ್ರಭುತ್ವ" ಎಂಬ ವಿನೂತನ ಪರಿಕಲ್ಪನೆಯ ಮೂಲಕ ಜನರ ದೂರುಗಳಿಗೆ 24 ಗಂಟೆಯೊಳಗೆ ಸರ್ಕಾರದ ಪ್ರತಿಕ್ರಿಯೆ ದೊರೆಯುವ ವ್ಯವಸ್ಥೆಯನ್ನು ರೂಪಿಸಿದ್ದು ದೇಶದಲ್ಲಿಯೇ ವಿಶಿಷ್ಟ ಪ್ರಯೋಗವೆಂದು ಪರಿಗಣಿಸಲಾಗಿದೆ. ಈ ಯೋಜನೆಗಳು ಎಚ್.ಕೆ. ಪಾಟೀಲರ ಕನಸಿನ ಕೂಸುಗಳಾಗಿವೆ.

ಹೈದರಾಬಾದ್-ಕರ್ನಾಟಕ ಪ್ರದೇಶಕ್ಕೆ ಸಂವಿಧಾನದ 371(ಜೆ) ವಿಧಿಯಡಿ ವಿಶೇಷ ಸ್ಥಾನಮಾನ ಕಲ್ಪಿಸುವ ಪ್ರಕ್ರಿಯೆಯಲ್ಲಿ ಅವರು ಮಹತ್ವದ ಪಾತ್ರವಹಿಸಿದ್ದರು. ಪ್ರಾದೇಶಿಕ ಅಸಮಾನತೆ ನಿವಾರಣೆಗೆ ಸಚಿವ ಸಂಪುಟ ಉಪಸಮಿತಿ ಅಧ್ಯಕ್ಷರಾಗಿ ವರದಿ ಸಲ್ಲಿಸಿದ್ದಲ್ಲದೆ, ಗ್ರಾಮ ಸ್ವರಾಜ್ ಕಾಯ್ದೆ-2015 ಜಾರಿಗೆ ತಂದು 434 ಹೊಸ ಗ್ರಾಮ ಪಂಚಾಯಿತಿಗಳ ಪುನರ್ವಿಂಗಡಣೆಗೆ ಕಾರಣರಾಗಿದ್ದರು. ದೇಶದಲ್ಲೇ ಪ್ರಥಮ ಮಹಾತ್ಮ ಗಾಂಧಿ ಗ್ರಾಮೀಣ ಪಂಚಾಯತ್ ರಾಜ್ ವಿಶ್ವವಿದ್ಯಾಲಯವನ್ನು ಗದಗದಲ್ಲಿ ಸ್ಥಾಪಿಸಲು ಅವರು ಶ್ರಮಿಸಿದ್ದರು.

ಉತ್ತರ ಕರ್ನಾಟಕದ ಜನರ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತಲುಪಿಸಲು ಸದನದ ಕಲಾಪಗಳನ್ನು ಪರಿಣಾಮಕಾರಿಯಾಗಿ ಬಳಸಿಕೊಂಡ ನಾಯಕರಲ್ಲಿ ಎಚ್.ಕೆ. ಪಾಟೀಲರು ಪ್ರಮುಖರು. ಈ ಎಲ್ಲ ಸಾಧನೆಗಳನ್ನು ಪರಿಗಣಿಸಿ ಪಕ್ಷದ ಹೈಕಮಾಂಡ್ ಅವರಿಗೆ ಉಪ ಮುಖ್ಯಮಂತ್ರಿ ಅಥವಾ ಸಚಿವ ಸ್ಥಾನ ನೀಡಬೇಕೆಂಬುದು ಅವರ ಅಭಿಮಾನಿಗಳ ಒತ್ತಾಯವಾಗಿದೆ.

ಒಂದು ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷ ಸಂಕಷ್ಟಕ್ಕೆ ಸಿಲುಕಿದ್ದಾಗ ರಾಜ್ಯಾದ್ಯಂತ ಪಕ್ಷ ಸಂಘಟನೆಯಲ್ಲಿ ಪ್ರಮುಖ ಪಾತ್ರವಹಿಸಿದ ನಾಯಕರಲ್ಲಿ ಎಚ್.ಕೆ. ಪಾಟೀಲರು ಒಬ್ಬರು. ಮಾಜಿ ಮುಖ್ಯಮಂತ್ರಿಗಳಾದ ಎಸ್.ಎಂ. ಕೃಷ್ಣ, ಧರ್ಮಸಿಂಗ್ ಹಾಗೂ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರೊಂದಿಗೆ ಪಕ್ಷವನ್ನು ಬಲಪಡಿಸುವಲ್ಲಿ ಅವರು ಸಲ್ಲಿಸಿದ ಸೇವೆಯನ್ನು ಅಭಿಮಾನಿಗಳು ನೆನಪಿಸಿಕೊಳ್ಳುತ್ತಾರೆ.

ಸಾಮಾಜಿಕ, ಆರ್ಥಿಕ, ಧಾರ್ಮಿಕ, ರಾಜಕೀಯ ಹಾಗೂ ಶೈಕ್ಷಣಿಕ ಕ್ಷೇತ್ರಗಳ ಯಾವುದೇ ಸಮಸ್ಯೆಯ ಆಳವನ್ನು ಅರಿತು ಪರಿಹಾರ ಸೂಚಿಸುವ ಅಪರೂಪದ ಧುರೀಣರಾಗಿರುವ ಎಚ್.ಕೆ. ಪಾಟೀಲರಿಗೆ ಸಚಿವ ಸ್ಥಾನ ನೀಡಬೇಕೆಂದು ಜಿಲ್ಲೆಯಾದ್ಯಂತ ನಡೆಯುತ್ತಿರುವ ಹೋರಾಟಕ್ಕೂ ಇದೇ ಕಾರಣವಾಗಿದೆ. ಇಂತಹ ಶುದ್ಧ ಚಾರಿತ್ರ್ಯವುಳ್ಳ ನಾಯಕರಿಂದ ಸದನದ ಘನತೆ ಹೆಚ್ಚುತ್ತದೆ. ಗದಗ ಜಿಲ್ಲೆ ಹಾಗೂ ಉತ್ತರ ಕರ್ನಾಟಕದ ಸರ್ವತೋಮುಖ ಅಭಿವೃದ್ಧಿಗಾಗಿ ಅವರಿಗೆ ಸಚಿವ ಸಂಪುಟದಲ್ಲಿ ಸೂಕ್ತ ಸ್ಥಾನಮಾನ ದೊರೆಯಬೇಕು ಎಂಬುದು ಅವರ ಅಭಿಮಾನಿಗಳ ಆಶಯವಾಗಿದೆ.



– ಎ.ಎಸ್. ಮಕಾನದಾರ
ಕವಿ ಹಾಗೂ ಪ್ರಕಾಶಕ, ಗದಗ

**ಪರಿಸರ ಉಳಿವೇ ನಮ್ಮ ಮೂಲಮಂತ್ರವಾಗಬೇಕು: ಡಾ. ಸಾಹಿರಾ ಬಾನು**

# 'ಮನೆಗೊಂದು ಗಿಡ, ಊರಿಗೊಂದು ವನ' ಅಭಿಯಾನಕ್ಕೆ ಕರೆ

■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಪರಿಸರ ಸಂರಕ್ಷಣೆ ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯಾಗಿದ್ದು, "ಮನೆಗೊಂದು ಗಿಡ-ಊರಿಗೊಂದು ವನ" ಎಂಬ ಸಂಕಲ್ಪದೊಂದಿಗೆ ಪ್ರತಿಯೊಬ್ಬರೂ ಪರಿಸರ ಉಳಿವಿಗೆ ಕೈಜೋಡಿಸಬೇಕು ಎಂದು ಅಮ್ಮ ಗ್ರಾಮೀಣ ಅಭಿವೃದ್ಧಿ ಸಂಸ್ಥೆಯ ಮುಖ್ಯಸ್ಥೆ ಹಾಗೂ ಸಮಾಜಸೇವಕಿ ಡಾ. ಸಾಹಿರಾ ಬಾನು ಕರೆ ನೀಡಿದರು.



ಪಟ್ಟಣದ ಸೋನಿಯಾ ಗಾಂಧಿನಗರದಲ್ಲಿ ನಡೆದ ಪರಿಸರ ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಆಧುನಿಕ ಜೀವನಶೈಲಿಯಿಂದ ಪರಿಸರ ಮಾಲಿನ್ಯ ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು, ಜಾಗತಿಕ ತಾಪಮಾನ ಏರಿಕೆ ಮನುಕುಲಕ್ಕೆ ಗಂಭೀರ ಸವಾಲಾಗಿ ಪರಿಣಮಿಸಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಮರಗಳ ಸಂರಕ್ಷಣೆ ಮತ್ತು ವೃಕ್ಷಾರೋಪಣೆಗೆ ಹೆಚ್ಚಿನ ಆದ್ಯತೆ ನೀಡುವ ಮೂಲಕ ಮುಂದಿನ ಪೀಳಿಗೆಗೆ ಉತ್ತಮ ಪರಿಸರವನ್ನು ನೀಡುವುದು ಪ್ರತಿಯೊಬ್ಬರ ಹೊಣೆಗಾರಿಕೆಯಾಗಿದೆ ಎಂದು ಹೇಳಿದರು.

> "ಪರಿಸರ ಸಂರಕ್ಷಣೆ ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯಾಗಿದೆ. 'ಮನೆಗೊಂದು ಗಿಡ, ಊರಿಗೊಂದು ವನ' ಎಂಬುದು ನಮ್ಮ ಮೂಲಮಂತ್ರವಾಗಬೇಕು."
> – **ಡಾ. ಸಾಹಿರಾ ಬಾನು,**
> ಅಮ್ಮ ಗ್ರಾಮೀಣ ಅಭಿವೃದ್ಧಿ ಸಂಸ್ಥೆಯ ಮುಖ್ಯಸ್ಥೆ

ಪುರಸಭೆ ಅಧ್ಯಕ್ಷೆ ಹಾಗೂ ಅಮ್ಮ ಸಂಸ್ಥೆಯ ನಿರ್ದೇಶಕಿ ರೇಷ್ಮಾ ಸಿಕಂದರ್ ಮಾತನಾಡಿ, ಪರಿಸರವನ್ನು ನಿರ್ಲಕ್ಷಿಸಿದರೆ ಭವಿಷ್ಯದಲ್ಲಿ ಗಂಭೀರ ಸಮಸ್ಯೆಗಳನ್ನು ಎದುರಿಸಬೇಕಾಗುತ್ತದೆ. ಪಾಲಕರು ಮಕ್ಕಳನ್ನು ಬೆಳೆಸುವಷ್ಟೇ ಕಾಳಜಿಯಿಂದ ಗಿಡಗಳನ್ನು ಬೆಳೆಸಿ ಸಂರಕ್ಷಿಸಬೇಕು ಎಂದು ತಿಳಿಸಿದರು.

ವಾಯು ಮಾಲಿನ್ಯ, ಜಲ ಮಾಲಿನ್ಯ ಹಾಗೂ ಶಬ್ದ ಮಾಲಿನ್ಯ ನಿಯಂತ್ರಣಕ್ಕೆ ಎಲ್ಲರೂ ಒಗ್ಗಟ್ಟಿನಿಂದ ಶ್ರಮಿಸಬೇಕು. ಪರಿಸರ ಸಮತೋಲನ ಕಾಪಾಡುವುದು ಇಂದಿನ ಅಗತ್ಯವಾಗಿದೆ ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ತಾಲೂಕು ಮಹಿಳಾ ಘಟಕದ ಅಧ್ಯಕ್ಷೆ ಯಶೋಧ ಮಂಜುನಾಥ್, ಅಮ್ಮ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಶಿಯಾ ಬೇಗಂ, ನಿರ್ದೇಶಕಿ ನಜ್ಮಾ, ರೋಹಿಣಿ ಗುರುರಾಜ್, ಆಶಾ ಕಾರ್ಯಕರ್ತೆ ಮುದ್ದಕ್ಕ ಸೇರಿದಂತೆ ಅಮ್ಮ ಸಂಸ್ಥೆಯ ಸದಸ್ಯರು ಉಪಸ್ಥಿತರಿದ್ದರು.

**ಒತ್ತಡದ ಬದುಕಿಗೆ ಯೋಗವೇ ಪರಿಹಾರ: ಅಕ್ಕಿ ತೋಟೇಶ್**

# ಯೋಗದಿಂದ ರೋಗಮುಕ್ತಿ ಸಾಧ್ಯ

■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಆಧುನಿಕ ಜೀವನಶೈಲಿ ಮತ್ತು ಬದಲಾಗುತ್ತಿರುವ ಪರಿಸ್ಥಿತಿಗಳ ನಡುವೆ ಮನುಷ್ಯನ ಬದುಕು ಒತ್ತಡಮಯವಾಗಿದ್ದು, ದೈಹಿಕ ಹಾಗೂ ಮಾನಸಿಕ ಆರೋಗ್ಯ ಕಾಪಾಡಿಕೊಳ್ಳಲು ಯೋಗ ಅತ್ಯಗತ್ಯವಾಗಿದೆ ಎಂದು ಜಿಲ್ಲಾ ಪಂಚಾಯತಿ ಮಾಜಿ ಸದಸ್ಯ ಅಕ್ಕಿ ತೋಟೇಶ್ ಹೇಳಿದರು.




ತಾಲೂಕಿನ ತಂಬ್ರಹಳ್ಳಿ ಗ್ರಾಮದಲ್ಲಿ ಶ್ರೀದೇವಿ ಪ್ರಸಾದ್ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ 10 ದಿನಗಳ ಯೋಗ ತರಬೇತಿ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಯೋಗವು ಭಾರತದ ಪುರಾತನ ಪರಂಪರೆಯ ಅಮೂಲ್ಯ ಕೊಡುಗೆಯಾಗಿದ್ದು, ಇಂದು ವಿಶ್ವದಾದ್ಯಂತ ಸ್ವೀಕಾರಾರ್ಹತೆ ಪಡೆದುಕೊಂಡಿದೆ. ನಿಯಮಿತ ಯೋಗಾಭ್ಯಾಸದಿಂದ ಆರೋಗ್ಯವಂತ ಜೀವನ ನಡೆಸಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

> "ಒತ್ತಡ ಮತ್ತು ರೋಗಗಳಿಂದ ಮುಕ್ತ ಜೀವನ ನಡೆಸಲು ಯೋಗ ಅತ್ಯಗತ್ಯ. ಪ್ರತಿಯೊಬ್ಬರೂ ಯೋಗವನ್ನು ದಿನನಿತ್ಯದ ಬದುಕಿನ ಭಾಗವಾಗಿಸಿಕೊಳ್ಳಬೇಕು."
> – **ಅಕ್ಕಿ ತೋಟೇಶ್,** ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ

ಪಿಎಸ್‌ಐ ಚಂದ್ರಶೇಖರ್ ಮಾತನಾಡಿ, ಯೋಗವು ಯಾವುದೇ ನಿರ್ದಿಷ್ಟ ವಯೋಮಿತಿಗೆ ಸೀಮಿತವಾಗಿಲ್ಲ. ಒತ್ತಡ ಮತ್ತು ಆತಂಕಗಳಿಂದ ಕೂಡಿದ ಇಂದಿನ ಬದುಕಿನಲ್ಲಿ ಪ್ರತಿಯೊಬ್ಬರೂ ಯೋಗಾಭ್ಯಾಸವನ್ನು ಜೀವನದ ಭಾಗವಾಗಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಪಿಡಿಒ ಚಂದ್ರಶೇಖರ್, ಕಾಲೇಜು ಪ್ರಾಂಶುಪಾಲ ಬಸವರಾಜ, ತಾಲೂಕು ಪಂಚಾಯಿತಿ ಮಾಜಿ ಸದಸ್ಯ ಕೊಟ್ರೇಶ್, ಬಿಡಿಸಿಸಿ ಬ್ಯಾಂಕ್ ಸದಸ್ಯ ವೈ. ಸುರೇಶ, ಎಣ್ಣೆಕಾಳು ಸೊಸೈಟಿ ಅಧ್ಯಕ್ಷ ಸುಣಗಾರ ಪರಶುರಾಮ, ಹಾಲು ಉತ್ಪಾದಕರ ಸಂಘದ ಅಧ್ಯಕ್ಷ ಡಿ.ಎಂ. ಆನಂದ್, ಮುಖ್ಯ ಶಿಕ್ಷಕಿ ರಾಜೇಶ್ವರಿ, ಎಸ್‌ಡಿಎಂಸಿ ಅಧ್ಯಕ್ಷ ನೀಲಗಿರಿ, ಗ್ಯಾರಂಟಿ ಸಮಿತಿ ಸದಸ್ಯ ಜಿ. ಗಿರೀಶ, ಸಾಹಿತ್ಯ ಪರಿಷತ್ ಅಧ್ಯಕ್ಷ ಎಸ್.ವಿ. ಪಾಟೀಲ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

**ಬೋಧನೆಗೆ ಅಡ್ಡಿಯಾಗುತ್ತಿರುವ ಹೆಚ್ಚುವರಿ ಹೊಣೆಗಾರಿಕೆಗಳ ಬಗ್ಗೆ ಸರ್ಕಾರಕ್ಕೆ ಎಸ್.ವಿ. ಸಂಕನೂರ ಆಗ್ರಹ**

# ಶಿಕ್ಷಕರನ್ನು ಅನ್ಯ ಕಾರ್ಯಗಳಿಂದ ಮುಕ್ತಿಗೊಳಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಶಿಕ್ಷಣದ ಗುಣಮಟ್ಟವನ್ನು ಇನ್ನಷ್ಟು ಸುಧಾರಿಸಲು ಶಿಕ್ಷಕರನ್ನು ಬೋಧನೆಗೆ ಸಂಬಂಧಿಸದ ವಿವಿಧ ಸರ್ಕಾರಿ ಕಾರ್ಯಗಳಿಂದ ಮುಕ್ತಿಗೊಳಿಸಬೇಕು ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಸರ್ಕಾರವನ್ನು ಒತ್ತಾಯಿಸಿದರು.



ನಗರದ ಪ್ರವಾಸಿ ಮಂದಿರದಲ್ಲಿ ಪದೋನ್ನತಿ ಪಡೆದ ಮುಖ್ಯೋಪಾಧ್ಯಾಯರು ಹಾಗೂ ಕರ್ನಾಟಕ ರಾಜ್ಯ ಪದವಿ ಕಾಲೇಜುಗಳ ಉಪನ್ಯಾಸಕರ ಸಂಘದ ಜಿಲ್ಲಾ ಘಟಕಕ್ಕೆ ಅವಿರೋಧವಾಗಿ ಆಯ್ಕೆಯಾದ ಪದಾಧಿಕಾರಿಗಳಿಗೆ ಹಮ್ಮಿಕೊಂಡಿದ್ದ ಸನ್ಮಾನ ಸಮಾರಂಭದಲ್ಲಿ ಅವರು ಮಾತನಾಡಿದರು.

ಇತ್ತೀಚಿನ ವರ್ಷಗಳಲ್ಲಿ ಶಿಕ್ಷಕರು ಬಿಸಿಯೂಟ ಯೋಜನೆಗೆ ಅಗತ್ಯವಿರುವ ಸಾಮಗ್ರಿಗಳ ಖರೀದಿ, ಹಾಲು ಹಾಗೂ ಮೊಟ್ಟೆ ವಿತರಣೆ, ಬಿಎಲ್‌ಒ ಕಾರ್ಯ, ಜಾನುವಾರು ಗಣತಿ ಸೇರಿದಂತೆ ವಿವಿಧ ಇಲಾಖೆಗಳ ಹೆಚ್ಚುವರಿ ಕಾರ್ಯಗಳಲ್ಲಿ ತೊಡಗಿಸಿಕೊಳ್ಳುತ್ತಿರುವುದರಿಂದ ಬೋಧನಾ ಚಟುವಟಿಕೆಗಳಿಗೆ ಸಮಯದ ಕೊರತೆ ಉಂಟಾಗುತ್ತಿದೆ. ಇದರಿಂದ ಶಿಕ್ಷಣದ ಗುಣಮಟ್ಟ ಕಾಪಾಡಿಕೊಳ್ಳುವಲ್ಲಿ ಅಡಚಣೆಗಳು ಎದುರಾಗುತ್ತಿದ್ದು, ಶಿಕ್ಷಕರನ್ನು ಅನ್ಯ ಕಾರ್ಯಗಳಿಂದ ಮುಕ್ತಗೊಳಿಸುವ ಅಗತ್ಯವಿದೆ ಎಂದು ಹೇಳಿದರು.

ಶಿಕ್ಷಕರು ಸಮಾಜ ಮತ್ತು ರಾಷ್ಟ್ರ ನಿರ್ಮಾಣದ ಪ್ರಮುಖ ಶಕ್ತಿಯಾಗಿದ್ದು, ಅವರ ಸಂಪೂರ್ಣ ಗಮನ ವಿದ್ಯಾರ್ಥಿಗಳ ಭವಿಷ್ಯ ರೂಪಿಸುವತ್ತ ಇರಬೇಕು. ಶಿಕ್ಷಣ ಕ್ಷೇತ್ರದ ಸುಧಾರಣೆಗೆ ಶಿಕ್ಷಕರಿಗೆ ಅನುಕೂಲಕರ ವಾತಾವರಣ ಕಲ್ಪಿಸುವುದು ಸರ್ಕಾರದ ಜವಾಬ್ದಾರಿಯಾಗಿದೆ ಎಂದು ಸಂಕನೂರ ಅಭಿಪ್ರಾಯಪಟ್ಟರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ ಮಾತನಾಡಿ, ಶೈಕ್ಷಣಿಕ ಪ್ರಗತಿಗೆ ಮುಖ್ಯೋಪಾಧ್ಯಾಯರು ತಮ್ಮ ಸಹೋದ್ಯೋಗಿಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು ತಂಡದ ಮನೋಭಾವದೊಂದಿಗೆ ಕಾರ್ಯನಿರ್ವಹಿಸಬೇಕು ಎಂದು ಸಲಹೆ ನೀಡಿದರು.

> "ಶಿಕ್ಷಕರ ಸಮಯ ಮತ್ತು ಶಕ್ತಿಯು ವಿದ್ಯಾರ್ಥಿಗಳ ಭವಿಷ್ಯ ರೂಪಿಸುವುದಕ್ಕೆ ಮೀಸಲಾಗಬೇಕು. ಬೋಧನಾ ಕಾರ್ಯಕ್ಕೆ ಅಡ್ಡಿಯಾಗುವ ಅನ್ಯ ಇಲಾಖೆಗಳ ಹೊಣೆಗಾರಿಕೆಗಳಿಂದ ಶಿಕ್ಷಕರನ್ನು ಮುಕ್ತಗೊಳಿಸಿದಾಗ ಮಾತ್ರ ಶಿಕ್ಷಣದ ಗುಣಮಟ್ಟ ಮತ್ತಷ್ಟು ಉತ್ತಮಗೊಳ್ಳಲಿದೆ."
> – ಎಸ್.ವಿ. ಸಂಕನೂರ, ವಿಧಾನ ಪರಿಷತ್ ಸದಸ್ಯ

ಸಹಶಿಕ್ಷಕರ ಸಂಘದ ಜಿಲ್ಲಾ ಅಧ್ಯಕ್ಷ ಬಿ.ಎಫ್. ಪೂಜಾರ ಮಾತನಾಡಿ, ಶಿಕ್ಷಕರು ಹಾಗೂ ಪದವೀಧರರ ಸಮಸ್ಯೆಗಳನ್ನು ವಿಧಾನ ಪರಿಷತ್ತಿನಲ್ಲಿ ಪರಿಣಾಮಕಾರಿಯಾಗಿ ಪ್ರಸ್ತಾಪಿಸಿ ಸರ್ಕಾರದ ಗಮನ ಸೆಳೆಯುವ ಮೂಲಕ ಪರಿಹಾರಕ್ಕೆ ಶ್ರಮಿಸುತ್ತಿರುವ ಎಸ್.ವಿ. ಸಂಕನೂರ ಅವರ ಕಾರ್ಯ ಶ್ಲಾಘನೀಯವಾಗಿದೆ ಎಂದು ಹೇಳಿದರು.

ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಂ.ಎಸ್. ಮಸನಾಯಕ ಮಾತನಾಡಿ, ಸಂಘಟನೆಯ ಪದಾಧಿಕಾರಿಗಳು ಹಾಗೂ ಪದೋನ್ನತಿ ಪಡೆದ ಮುಖ್ಯೋಪಾಧ್ಯಾಯರು ಶಿಸ್ತು, ಪ್ರಾಮಾಣಿಕತೆ ಮತ್ತು ಬದ್ಧತೆಯಿಂದ ಕರ್ತವ್ಯ ನಿರ್ವಹಿಸಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಪದವಿ ಕಾಲೇಜುಗಳ ಉಪನ್ಯಾಸಕರ ಸಂಘದ ಜಿಲ್ಲಾ ಘಟಕಕ್ಕೆ ಅವಿರೋಧವಾಗಿ ಆಯ್ಕೆಯಾದ ಅಧ್ಯಕ್ಷ ಎಸ್.ಎಸ್. ಸೋಮಣ್ಣವರ, ಕಾರ್ಯಾಧ್ಯಕ್ಷ ಮಂಜುನಾಥ ಸಿ. ಕೊಕ್ಕರಗುಂದಿ, ಉಪಾಧ್ಯಕ್ಷೆ ಅಮನ್ ಎಸ್. ಗುಳೇದಗುಡ್ಡ, ಖಜಾಂಚಿ ಮಲ್ಲಿಕಾರ್ಜುನ ಕುಲಕರ್ಣಿ, ಪ್ರಧಾನ ಕಾರ್ಯದರ್ಶಿ ಫಕ್ಕಿರೇಶ ಬೆಳವಗಿ ಸೇರಿದಂತೆ ಪದಾಧಿಕಾರಿಗಳನ್ನು ಸನ್ಮಾನಿಸಲಾಯಿತು.

ಅದೇ ರೀತಿ ಮುಖ್ಯೋಪಾಧ್ಯಾಯರಾಗಿ ಪದೋನ್ನತಿ ಹೊಂದಿದ ಕೆ.ಎ. ಉಪ್ಪಿನ, ಗಿರೀಶ ದಾಸರ, ಜ್ಯೋತಿ ಶೆಟ್ಟರ, ಸಂಜೀವಿನಿ ಕಲಗುಡಿ, ಎಸ್.ಜಿ. ಕೋಲಕಾರ, ಎಸ್.ಎ. ಸಲೋಡ, ಶಾರದಾ ಮುಳಗುಂದಮಠ, ಸಂಜೋತಾ ಪಾಟೀಲ ಹಾಗೂ ವಿಜಯಲಕ್ಷ್ಮಿ ಭಜಂತ್ರಿ ಅವರನ್ನು ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಪ್ರಾಚಾರ್ಯರಾದ ಎಸ್.ಬಿ. ಹಾವೇರಿ, ಬಿ.ಎಸ್. ಗಿರಿತಮ್ಮಣ್ಣವರ, ಈರಣ್ಣ ಹಾದಿಮನಿ, ಉಪನ್ಯಾಸಕರಾದ ಎಸ್.ಐ. ಮೇಟಿ, ಶ್ರೀಶೈಲ ಬೀರಕಬ್ಬಿ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಪ್ರಾ. ಅಶೋಕ ಅಂಗಡಿ ಸ್ವಾಗತಿಸಿದರು. ಮುಖ್ಯೋಪಾಧ್ಯಾಯ ಎ.ಎಸ್. ಪಾಟೀಲ ವಂದಿಸಿದರು.

**ವಾಣಿಜ್ಯ ಮಹಾವಿದ್ಯಾಲಯದ ಎನ್‌ಎಸ್‌ಎಸ್ ಘಟಕದಿಂದ ಆರು ದಿನಗಳ ವಿಶೇಷ ಜಾಗೃತಿ ಕಾರ್ಯಕ್ರಮ**

# ನಶಾ ಮುಕ್ತ ಭಾರತ ಅಭಿಯಾನಕ್ಕೆ ಚಾಲನೆ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಆದರ್ಶ ಶಿಕ್ಷಣ ಸಮಿತಿಯ ಶ್ರೀ ವಿ.ಆರ್. ಕುಷ್ಟಗಿ ಮೆಮೋರಿಯಲ್ ಕಾಲೇಜ್ ಆಫ್ ಕಾಮರ್ಸ್‌ನ ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್) ಘಟಕ ಹಾಗೂ ಐಕ್ಯೂಎಸಿ ಆಶ್ರಯದಲ್ಲಿ "ನಶಾ ಮುಕ್ತ ಭಾರತ ಅಭಿಯಾನ"ದ ಅಂಗವಾಗಿ ಹಮ್ಮಿಕೊಂಡಿರುವ ಆರು ದಿನಗಳ ವಿಶೇಷ ಜಾಗೃತಿ ಕಾರ್ಯಕ್ರಮಕ್ಕೆ ಬುಧವಾರ ಚಾಲನೆ ನೀಡಲಾಯಿತು.



ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ವಿ.ಟಿ. ನಾಯ್ಕ ಅವರು ಸಸಿಗೆ ನೀರುಣಿಸುವ ಮೂಲಕ ಅಭಿಯಾನಕ್ಕೆ ಚಾಲನೆ ನೀಡಿದರು. ಬಳಿಕ ಮಾತನಾಡಿದ ಅವರು, ಯುವ ಸಮುದಾಯವನ್ನು ಮಾದಕ ವ್ಯಸನದಿಂದ ದೂರವಿರಿಸಿ ಆರೋಗ್ಯಕರ ಜೀವನಶೈಲಿಯತ್ತ ಕೊಂಡೊಯ್ಯುವ ಉದ್ದೇಶದಿಂದ ಈ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಅಭಿಯಾನದ ಅಂಗವಾಗಿ ವನಮಹೋತ್ಸವ, ಮಾದಕ ದ್ರವ್ಯಗಳ ದುಷ್ಪರಿಣಾಮಗಳ ಕುರಿತು ವಿಶೇಷ ಉಪನ್ಯಾಸ, ಚಿತ್ರಕಲಾ ಸ್ಪರ್ಧೆ, ಭಾಷಣ ಹಾಗೂ ಪ್ರಬಂಧ ಸ್ಪರ್ಧೆ ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದ್ದು, ವಿದ್ಯಾರ್ಥಿಗಳು ಸಕ್ರಿಯವಾಗಿ ಭಾಗವಹಿಸುವಂತೆ ಕರೆ ನೀಡಿದರು.

> "ಮಾದಕ ವ್ಯಸನವು ವ್ಯಕ್ತಿಯ ಆರೋಗ್ಯ, ಶಿಕ್ಷಣ ಹಾಗೂ ಕುಟುಂಬದ ಭವಿಷ್ಯವನ್ನು ಹಾಳು ಮಾಡುವ ದೊಡ್ಡ ಸಾಮಾಜಿಕ ಪಿಡುಗಾಗಿದೆ. ಯುವಜನತೆ ವ್ಯಸನಗಳಿಂದ ದೂರವಿದ್ದು ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಂಡಾಗ ಮಾತ್ರ ನಶಾ ಮುಕ್ತ ಭಾರತ ನಿರ್ಮಾಣ ಸಾಧ್ಯ."
> – **ಡಾ. ವಿ.ಟಿ. ನಾಯ್ಕ,** ಪ್ರಾಚಾರ್ಯರು, ಶ್ರೀ ವಿ.ಆರ್. ಕುಷ್ಟಗಿ ಮೆಮೋರಿಯಲ್ ಕಾಲೇಜ್ ಆಫ್ ಕಾಮರ್ಸ್

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ನಶಾ ಮುಕ್ತ ಭಾರತ ಪ್ರತಿಜ್ಞಾವಿಧಿ ಬೋಧಿಸಲಾಯಿತು. ಮಾದಕ ವಸ್ತುಗಳ ಸೇವನೆಯಿಂದ ವ್ಯಕ್ತಿಯ ಆರೋಗ್ಯ, ಶಿಕ್ಷಣ, ಉದ್ಯೋಗ ಹಾಗೂ ಕುಟುಂಬ ಜೀವನದ ಮೇಲೆ ಉಂಟಾಗುವ ದುಷ್ಪರಿಣಾಮಗಳ ಕುರಿತು ಅರಿವು ಮೂಡಿಸಲಾಯಿತು. ಯುವಜನರಲ್ಲಿ ಜಾಗೃತಿ ಮೂಡಿಸಿ ವ್ಯಸನಮುಕ್ತ ಸಮಾಜ ನಿರ್ಮಿಸುವುದು ಅಭಿಯಾನದ ಪ್ರಮುಖ ಉದ್ದೇಶವಾಗಿದೆ ಎಂದು ತಿಳಿಸಲಾಯಿತು.

ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿ ಪ್ರೊ. ಬಿ.ಪಿ. ಜೈನ್ ಮಾತನಾಡಿ, ವ್ಯಸನಮುಕ್ತ ಭಾರತ ನಿರ್ಮಾಣಕ್ಕೆ ಸರ್ಕಾರದೊಂದಿಗೆ ಪೋಷಕರು, ಶಿಕ್ಷಕರು ಹಾಗೂ ಸಮಾಜದ ಪ್ರತಿಯೊಬ್ಬರೂ ಕೈಜೋಡಿಸಬೇಕಾಗಿದೆ ಎಂದು ಹೇಳಿದರು. ಯುವಕರು ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಂಡು ಉತ್ತಮ ಹವ್ಯಾಸಗಳನ್ನು ಬೆಳೆಸಿಕೊಳ್ಳುವ ಮೂಲಕ ಸಮಾಜಕ್ಕೆ ಮಾದರಿಯಾಗಬೇಕು ಎಂದು ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಡಾ. ಸುನಿತಾ ನಾಯಕ, ಪ್ರೊ. ಸಲ್ಮಾ ಬೆಳಗಾಂ, ಪ್ರಶಾಂತ್ ಹೊಂಬಾಳಿ, ಪ್ರೊ. ಈಶ್ವರ ಯಾವಗಲ್, ಪ್ರೊ. ಮೋಹನ್ ಡಿ., ಪ್ರೊ. ಸುನಿತಾ ತಿರ್ಲಾಪುರ, ಸವಿತಾ ಇಬ್ಬನಿ, ಭಾಗ್ಯಶ್ರೀ ಕುರಿ, ಯಶವಂತ್ ಯಾವಗಲ್ ಸೇರಿದಂತೆ ಕಾಲೇಜಿನ ಉಪನ್ಯಾಸಕರು, ಎನ್‌ಎಸ್‌ಎಸ್ ಸ್ವಯಂಸೇವಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಅರಿವು ವಿದ್ಯಾಭ್ಯಾಸ ಸಾಲಕ್ಕೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಕ್ರಿಶ್ಚಿಯನ್ ಸಮುದಾಯ ಅಭಿವೃದ್ಧಿ ನಿಗಮ (ಕೆಸಿಸಿಡಿಸಿ) ವತಿಯಿಂದ 2026–27ನೇ ಸಾಲಿನ ಅರಿವು ವಿದ್ಯಾಭ್ಯಾಸ ಸಾಲ ಯೋಜನೆಗೆ ಕ್ರಿಶ್ಚಿಯನ್ ಸಮುದಾಯದ ಅರ್ಹ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಸಿಇಟಿ, ನೀಟ್ ಹಾಗೂ ಜೆಇಇ ಮೂಲಕ ಆಯ್ಕೆಯಾಗಿರುವ ಅಥವಾ ಸರ್ಕಾರಿ, ಖಾಸಗಿ ಹಾಗೂ ಮ್ಯಾನೇಜ್‌ಮೆಂಟ್ ಕೋಟಾದಡಿ ಎಂಬಿಬಿಎಸ್, ಬಿಇ, ಬಿ.ಟೆಕ್, ಎಂ.ಟೆಕ್, ಎಂಬಿಎ, ಎಂಸಿಎ, ಎಲ್‌ಎಲ್‌ಬಿ, ಬಿ.ಫಾರ್ಮಾ ಸೇರಿದಂತೆ ವಿವಿಧ ವೃತ್ತಿಪರ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ₹50 ಸಾವಿರದಿಂದ ₹5 ಲಕ್ಷದವರೆಗೆ ಸಾಲ ನೀಡಲಾಗುತ್ತದೆ.

ಅರ್ಹ ವಿದ್ಯಾರ್ಥಿಗಳು ನಿಗಮದ ವೆಬ್‌ಸೈಟ್‌ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವ್ಯವಸ್ಥಾಪಕರ ಕಚೇರಿ, ಮೌಲಾನಾ ಆಜಾದ್ ಅಲ್ಪಸಂಖ್ಯಾತರ ಭವನ, ಹುಬ್ಬಳ್ಳಿ ರಸ್ತೆ, ಗದಗ ಅಥವಾ ದೂರವಾಣಿ ಸಂಖ್ಯೆ 08372–295147 ಹಾಗೂ 6360753075 ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ಬಿಸಿಯೂಟದಲ್ಲಿ ಹಲ್ಲಿ ಬಿದ್ದ ಶಂಕೆ; 67 ವಿದ್ಯಾರ್ಥಿಗಳು ಆಸ್ಪತ್ರೆಗೆ ದಾಖಲು!

■ ವಿಜಯಸಾಕ್ಷಿ ಸುದ್ದಿ, ಮಂಡ್ಯ

ಶಾಲೆಯ ಬಿಸಿಯೂಟದಲ್ಲಿ ಹಲ್ಲಿ ಬಿದ್ದಿರುವ ಶಂಕೆ ವ್ಯಕ್ತವಾದ ಹಿನ್ನೆಲೆಯಲ್ಲಿ ಮುಂಜಾಗ್ರತಾ ಕ್ರಮವಾಗಿ 67 ವಿದ್ಯಾರ್ಥಿಗಳನ್ನು ಆಸ್ಪತ್ರೆಗೆ ದಾಖಲಿಸಿದ ಘಟನೆ ಮಂಡ್ಯ ಜಿಲ್ಲೆಯ ಮಳವಳ್ಳಿ ತಾಲೂಕಿನ ರಾವಣಿ ಗ್ರಾಮದಲ್ಲಿ ನಡೆದಿದೆ.

ರಾವಣಿ ಗ್ರಾಮದ ಸರ್ಕಾರಿ ಶಾಲೆಯಲ್ಲಿ ಈ ಘಟನೆ ನಡೆದಿದ್ದು, ಮಧ್ಯಾಹ್ನದ ಬಿಸಿಯೂಟ ಸೇವಿಸುವ ವೇಳೆ ವಿದ್ಯಾರ್ಥಿಯೊಬ್ಬನ ತಟ್ಟೆಯಲ್ಲಿ ಹಲ್ಲಿ ಬಾಲದಂತಿರುವ ವಸ್ತು ಕಂಡು ಬಂದಿದೆ. ಇದರಿಂದ ವಿದ್ಯಾರ್ಥಿಗಳು ಹಾಗೂ ಶಿಕ್ಷಕರಲ್ಲಿ ಆತಂಕ ಉಂಟಾಗಿದೆ.

### ಕುಡಿಯುವ ನೀರಿಲ್ಲ, ಗಬ್ಬೆದ್ದು ನಾರುವ ಶೌಚಾಲಯಗಳು; ದುರಸ್ತಿಯಿಲ್ಲದೆ ಹಾಳಾಗುತ್ತಿರುವ ಉಪಗ್ರಹ ಪರಿಕರಗಳು

# ಶಿಕ್ಷಕರ ತರಬೇತಿ ಕೇಂದ್ರವೇ ದುಸ್ಥಿತಿಯಲ್ಲಿ..!

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿಕ್ಷಕರಿಗೆ ತರಬೇತಿ, ಕಾರ್ಯಾಗಾರ ಹಾಗೂ ಶೈಕ್ಷಣಿಕ ಚಟುವಟಿಕೆಗಳ ಕೇಂದ್ರವಾಗಿರುವ ಶಿರಹಟ್ಟಿ ಕ್ಷೇತ್ರ ಸಂಪನ್ಮೂಲ ಕೇಂದ್ರ (ಬಿಆರ್‌ಸಿ) ಮೂಲ ಸೌಲಭ್ಯಗಳ ಕೊರತೆಯಿಂದ ತತ್ತರಿಸಿದ್ದು, "ಶಿಕ್ಷಕರಿಗೆ ಮಾದರಿಯಾಗಬೇಕಾದ ಕೇಂದ್ರವೇ ದುಸ್ಥಿತಿಗೆ ತಲುಪಿರುವುದು ವಿಪರ್ಯಾಸ" ಎಂಬ ಮಾತುಗಳು ಶಿಕ್ಷಕರ ವಲಯದಲ್ಲಿ ಕೇಳಿ ಬರುತ್ತಿವೆ.

ತಾಲೂಕಿನ ವಿವಿಧ ಶಾಲೆಗಳ ಶಿಕ್ಷಕರಿಗೆ ತರಬೇತಿ, ಕಾರ್ಯಾಗಾರ, ಸಭೆ ಸೇರಿದಂತೆ ಅನೇಕ ಶೈಕ್ಷಣಿಕ ಚಟುವಟಿಕೆಗಳು ನಡೆಯುವ ಈ ಕೇಂದ್ರ ಹಲವು ವರ್ಷಗಳಿಂದ ದುರಸ್ತಿಯಾಗದೇ ಉಳಿದಿದ್ದು, ಈಗ ಹೆಸರಿಗೆ ಮಾತ್ರ ಕ್ಷೇತ್ರ ಸಂಪನ್ಮೂಲ ಕೇಂದ್ರ ಎಂಬ ಸ್ಥಿತಿಗೆ ತಲುಪಿದೆ ಎಂಬ ಆರೋಪ ವ್ಯಕ್ತವಾಗಿದೆ.

**ಹಾಳಾಗುತ್ತಿರುವ ಉಪಗ್ರಹ ಆಧಾರಿತ ತರಬೇತಿ ಪರಿಕರಗಳು**

ಶಿಕ್ಷಕರಿಗೆ ಉಪಗ್ರಹ ಆಧಾರಿತ ಶೈಕ್ಷಣಿಕ ಕಾರ್ಯಕ್ರಮಗಳು ಹಾಗೂ ಟೆಲಿಕಾನ್ಫರೆನ್ಸ್‌ಗಳ ಮೂಲಕ ತರಬೇತಿ ನೀಡಲು ಅಳವಡಿಸಲಾಗಿದ್ದ ರೋಟ್ (Receive Only Terminal) ಸೇರಿದಂತೆ ವಿವಿಧ ಪರಿಕರಗಳು ದುರಸ್ತಿಯಲ್ಲಿವೆ. ಇವುಗಳನ್ನು ಸರಿಪಡಿಸುವಂತೆ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಹಲವು ಬಾರಿ ಮನವಿ ಸಲ್ಲಿಸಿದ್ದರೂ ಯಾವುದೇ ಕ್ರಮ ಕೈಗೊಳ್ಳದ ಕಾರಣ ಲಕ್ಷಾಂತರ ರೂ. ಮೌಲ್ಯದ ಪರಿಕರಗಳು ಹಾಳಾಗುವ ಹಂತ ತಲುಪಿವೆ ಎಂದು ಶಿಕ್ಷಕರು ಆರೋಪಿಸಿದ್ದಾರೆ.







**8–9 ವರ್ಷಗಳಿಂದ ಸುಣ್ಣ-ಬಣ್ಣವೇ ಇಲ್ಲ**

ಸುಮಾರು 8–9 ವರ್ಷಗಳಿಂದ ಕಟ್ಟಡಕ್ಕೆ ಸುಣ್ಣ–ಬಣ್ಣ ಬಳಿಯದೇ ಇರುವುದರಿಂದ ಗೋಡೆಗಳು ಬಿರುಕು ಬಿಟ್ಟಿದ್ದು, ಕಚೇರಿ ಜೀರ್ಣಾವಸ್ಥೆಯತ್ತ ಸಾಗುತ್ತಿದೆ. ಇದಕ್ಕೆ ಕಾಯಕಲ್ಪ ನೀಡಬೇಕಾದ ಅಧಿಕಾರಿಗಳು ಆಸಕ್ತಿ ವಹಿಸದಿರುವುದು ಶಿಕ್ಷಕರ ಅಸಮಾಧಾನಕ್ಕೆ ಕಾರಣವಾಗಿದೆ.

**ಕುಡಿಯುವ ನೀರಿಗೂ ಪರದಾಟ**

ಕೇಂದ್ರದಲ್ಲಿ ಕುಡಿಯುವ ನೀರಿನ ವ್ಯವಸ್ಥೆಯೇ ಇಲ್ಲ. ತರಬೇತಿಗಾಗಿ ಆಗಮಿಸುವ ಶಿಕ್ಷಕರು ಕುಡಿಯುವ ನೀರಿಗಾಗಿ ಪರದಾಡುವ ಸ್ಥಿತಿ ನಿರ್ಮಾಣವಾಗಿದೆ. ಇನ್ನು ಶೌಚಾಲಯಗಳು ನಿರ್ವಹಣೆಯ ಕೊರತೆಯಿಂದ ಗಬ್ಬೆದ್ದು ನಾರುತ್ತಿದ್ದು, ಬಳಕೆಗೆ ಯೋಗ್ಯವಾಗಿಲ್ಲ.

> "ಶಿಕ್ಷಕರಿಗೆ ಗುಣಮಟ್ಟದ ತರಬೇತಿ ನೀಡಬೇಕಾದ ಕ್ಷೇತ್ರ ಸಂಪನ್ಮೂಲ ಕೇಂದ್ರವೇ ಮೂಲ ಸೌಲಭ್ಯಗಳಿಂದ ವಂಚಿತವಾಗಿದೆ. ಕಟ್ಟಡ, ಶೌಚಾಲಯ, ಕುಡಿಯುವ ನೀರು ಹಾಗೂ ತರಬೇತಿ ಪರಿಕರಗಳ ದುರಸ್ತಿಗೆ ತಕ್ಷಣ ಕ್ರಮ ಕೈಗೊಳ್ಳಬೇಕು."
> **– ಹೆಸರು ಹೇಳಲು ಬಯಸದ ಶಿಕ್ಷಕರು.**

ಕಚೇರಿ ಆವರಣದಲ್ಲಿ ಎಲ್ಲೆಂದರಲ್ಲಿ ಡೆಡ್‌ಸ್ಟಾಕ್ ಸಾಮಗ್ರಿಗಳು ಬಿದ್ದಿವೆ. ಕಸ–ಕಡ್ಡಿಗಳು ತುಂಬಿಕೊಂಡಿದ್ದು, ಸ್ವಚ್ಛತೆ ಸಂಪೂರ್ಣವಾಗಿ ಮರೀಚಿಕೆಯಾಗಿದೆ. ತಂತಿ ಬೇಲಿ ಇಲ್ಲದ ಕಾರಣ ಭದ್ರತೆಯ ಕೊರತೆಯೂ ಕಾಡುತ್ತಿದೆ.

ಇತ್ತೀಚೆಗೆ ಕ್ಷೇತ್ರ ಶಿಕ್ಷಣಾಧಿಕಾರಿ ಕಚೇರಿಯಲ್ಲಿ ಲೋಕಾಯುಕ್ತ ದಾಳಿ ನಡೆದ ಬೆನ್ನಲ್ಲೇ, ಅದರ ಪಕ್ಕದಲ್ಲಿರುವ ಕ್ಷೇತ್ರ ಸಂಪನ್ಮೂಲ ಕೇಂದ್ರದಲ್ಲಿಯೂ ಶಿಕ್ಷಕರಿಂದ ಹಣ ವಸೂಲಿ ಆರೋಪಗಳು ಕೇಳಿ ಬರುತ್ತಿವೆ. ಈ ಬಗ್ಗೆ ಜಿಲ್ಲಾ ಮಟ್ಟದ ಅಧಿಕಾರಿಗಳು ಗಂಭೀರ ತನಿಖೆ ನಡೆಸಬೇಕು ಎಂಬ ಒತ್ತಾಯ ಕೇಳಿ ಬಂದಿದೆ.

ಈ ಕುರಿತು ಪ್ರತಿಕ್ರಿಯಿಸಿದ ಉಪನಿರ್ದೇಶಕ ಆರ್.ಎಸ್. ಬುರಡಿ, ಕ್ಷೇತ್ರ ಸಂಪನ್ಮೂಲ ಕೇಂದ್ರದ ದುರಸ್ತಿ ಕುರಿತು ಪ್ರಸ್ತಾವನೆ ತರಿಸಿಕೊಂಡು ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

### ಊರಿನ ಒಳಿತು, ಉತ್ತಮ ಮಳೆ-ಬೆಳೆ ಹಾಗೂ ಜನರ ಸುಖ-ಶಾಂತಿಗಾಗಿ ವಿಶೇಷ ಪ್ರಾರ್ಥನೆ

# ಗಾಳೆಮ್ಮ ದೇವಿಗೆ ಭಕ್ತಿಪೂರ್ವಕ ಬೀಳ್ಕೊಡುಗೆ

■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ರಾಮನಗರದ ನಗರದೇವತೆ ಶ್ರೀ ಗಾಳೆಮ್ಮ ದೇವಿ ದೇವಸ್ಥಾನದ ಸಮೀಪ ರಾಮನಗರ ನಾಣಿಕೇರಿ ದೈವಸ್ಥರ ವತಿಯಿಂದ ಅಮ್ಮನ ಭಕ್ತಿಪೂರ್ವಕ ಕಳಿಸುವ ಕಾರ್ಯಕ್ರಮವನ್ನು ಗುರುವಾರ ಭಕ್ತಿ ಭಾವದಿಂದ ಹಾಗೂ ಸಾಂಪ್ರದಾಯಿಕವಾಗಿ ನೆರವೇರಿಸಲಾಯಿತು. ಗ್ರಾಮದ ಒಳಿತು, ಉತ್ತಮ ಮಳೆ–ಬೆಳೆ, ಜನರ ಆರೋಗ್ಯ ಹಾಗೂ ಸುಖ–ಶಾಂತಿಗಾಗಿ ಸಂಕಲ್ಪ ಮಾಡಿ ಅಮ್ಮನಿಗೆ ವಿಶೇಷ ಪೂಜೆ ಸಲ್ಲಿಸಿ ಭಕ್ತಿಪೂರ್ವಕವಾಗಿ ಕಳಿಸಿಕೊಡಲಾಯಿತು. ಈ ವೇಳೆ ಮಂಗಳಾರತಿ ಸೇರಿದಂತೆ ವಿವಿಧ ಧಾರ್ಮಿಕ ವಿಧಿವಿಧಾನಗಳನ್ನು ನೆರವೇರಿಸಿ ಭಕ್ತರು ದೇವಿಯ ಆಶೀರ್ವಾದ ಪಡೆದರು. ಕಾರ್ಯಕ್ರಮದಲ್ಲಿ ಅಪಾರ ಸಂಖ್ಯೆಯ ಭಕ್ತರು ಭಾಗವಹಿಸಿದ್ದು, ಧಾರ್ಮಿಕ ನಂಬಿಕೆ ಮತ್ತು ಸಂಪ್ರದಾಯದ



ಪ್ರತೀಕವಾಗಿ ಆಚರಿಸಲಾದ ಈ ಕಾರ್ಯಕ್ರಮ ಗಮನ ಸೆಳೆಯಿತು.

ಈ ಸಂದರ್ಭದಲ್ಲಿ ಸಿಎಂ ರಾಮಣ್ಣ, ಅರಸೀಕೆರೆ ಹನುಮಂತಪ್ಪ, ಮಡಿವಾಳರ ಬಾಳಪ್ಪ, ಬಂಗಾರಿ ಗಾಳಿರಾಜ್, ಸೆರಗಾರ ಹುಚ್ಚಪ್ಪ, ಸರ್ದಾರ್ ಯಮನೂರಪ್ಪ, ಬಡಲಡಕಿ ಕೃಷ್ಣಪ್ಪ, ರಾಚಣ್ಣನವರ ಸಣ್ಣ ಹುಚ್ಚಪ್ಪ, ಅರಳಿಹಳ್ಳಿ ರಾಮಚಂದ್ರಪ್ಪ, ಸರ್ದಾರ್ ಅಂಬಣ್ಣ, ಬಂಟರ ಗಾಳೆಪ್ಪ, ಚಿಗರಿ ಮಾರುತಿ, ಮಡಿವಾಳರ ಅಶೋಕ್, ಉಪ್ಪಾರ ಪ್ರಕಾಶ್, ಮೆಳ್ಳಿಕೇರಿ ಹುಲುಗಪ್ಪ, ಹುಗ್ಗಿ ಹುಲುಗಪ್ಪ, ಕುರುಬರ ಹನುಮಂತ, ಮರಡಿ ಬಸವರಾಜ್, ಮಡಿವಾಳರ ರಾಮನಗೌಡ, ಪೂಜಾರ್ ವೆಂಕಟೇಶಪ್ಪ, ಪೂಜಾರ್ ಮಂಜುನಾಥ ಸೇರಿದಂತೆ ರಾಮನಗರ ನಾಣಿಕೇರಿ ದೈವಸ್ಥರು ಹಾಗೂ ಶ್ರೀ ಗಾಳೆಮ್ಮ ದೇವಿ ಸೇವಾ ಟ್ರಸ್ಟ್‌ನ ಸರ್ವ ಸದಸ್ಯರು ಉಪಸ್ಥಿತರಿದ್ದರು.

### ಮೂರು ವಿದ್ಯಾರ್ಥಿಗಳ ಅದ್ಭುತ ಸಾಧನೆ; ರಾಜ್ಯಮಟ್ಟದಲ್ಲಿ ಗಮನ ಸೆಳೆದ ಫಲಿತಾಂಶ

# ಮತ್ತೊಮ್ಮೆ ಮಿಂಚಿದ ಕ್ರಿಯೇಟಿವ್ ಅಕಾಡೆಮಿ

### ನವೋದಯದಲ್ಲಿ ಕ್ರಿಯೇಟಿವ್ ಅಕಾಡೆಮಿಯ ವಿಜಯದ ನಗೆ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ನವೋದಯ ಪ್ರವೇಶ ಪರೀಕ್ಷೆ ತರಬೇತಿಯಲ್ಲಿ ರಾಜ್ಯದ ಗಮನ ಸೆಳೆದಿರುವ ಧಾರವಾಡದ ಕ್ರಿಯೇಟಿವ್ ಅಕಾಡೆಮಿ, 2025–26ನೇ ಸಾಲಿನ ನವೋದಯ ಪ್ರವೇಶ ಪರೀಕ್ಷೆಯಲ್ಲೂ ಗಮನಾರ್ಹ ಸಾಧನೆ ದಾಖಲಿಸಿದೆ. ಕಳೆದ 17 ವರ್ಷಗಳಿಂದ ನಿರಂತರವಾಗಿ ವಿದ್ಯಾರ್ಥಿಗಳಿಗೆ ಗುಣಮಟ್ಟದ ತರಬೇತಿ ನೀಡುತ್ತಾ ಅನೇಕ ವಿದ್ಯಾರ್ಥಿಗಳನ್ನು ನವೋದಯ ಹಾಗೂ ವಿವಿಧ ವಸತಿ ಶಾಲೆಗಳಿಗೆ ಆಯ್ಕೆ ಮಾಡಿಸುತ್ತಿರುವ ಸಂಸ್ಥೆ, ಈ ಬಾರಿಯೂ ತನ್ನ ಯಶಸ್ಸಿನ ಪರಂಪರೆಯನ್ನು ಮುಂದುವರಿಸಿದೆ.

ಇತ್ತೀಚೆಗೆ ಪ್ರಕಟವಾದ ಫಲಿತಾಂಶದಲ್ಲಿ ಕ್ರಿಯೇಟಿವ್ ಅಕಾಡೆಮಿಯ ಮೂವರು ವಿದ್ಯಾರ್ಥಿಗಳು ಉತ್ತಮ ಅಂಕಗಳೊಂದಿಗೆ ನವೋದಯ ಶಾಲೆಗೆ ಆಯ್ಕೆಯಾಗುವ ಮೂಲಕ ಸಂಸ್ಥೆಯ ಕೀರ್ತಿಯನ್ನು ಮತ್ತಷ್ಟು ಎತ್ತರಕ್ಕೆ ಕೊಂಡೊಯ್ದಿದ್ದಾರೆ.







ವಿದ್ಯಾರ್ಥಿ ಮೇಘರಾಜ ಗಾಳಿ ಶೇ.96.25 ಅಂಕಗಳನ್ನು ಪಡೆದು ಕೊಪ್ಪಳ ಜಿಲ್ಲೆಯಲ್ಲಿ 25ನೇ ರ್‍ಯಾಂಕ್ ಗಳಿಸಿದ್ದು, ಸಂಸ್ಥೆಯ ಹೆಮ್ಮೆಗೆ ಕಾರಣರಾಗಿದ್ದಾರೆ. ವಿದ್ಯಾರ್ಥಿನಿ ಅಮೃತಾ ಸಜ್ಜನರ ಶೇ.93.75 ಅಂಕಗಳನ್ನು ಪಡೆದು ಗದಗ ಜಿಲ್ಲೆಯಲ್ಲಿ 67ನೇ ರ್‍ಯಾಂಕ್ ಗಳಿಸಿದ್ದರೆ, ಸಂಗಮೇಶ ಚೌದರಿ ಶೇ.91.25 ಅಂಕಗಳೊಂದಿಗೆ ಧಾರವಾಡ ಜಿಲ್ಲೆಯಲ್ಲಿ 117ನೇ ರ್‍ಯಾಂಕ್ ಪಡೆದು ಸಾಧನೆ ಮೆರೆದಿದ್ದಾರೆ.

ಸಂಸ್ಥೆಯ ಈ ಫಲಿತಾಂಶ ವಿದ್ಯಾರ್ಥಿಗಳ ಶ್ರಮ, ಪಾಲಕರ ಸಹಕಾರ ಹಾಗೂ ಶಿಕ್ಷಕರ ಸಮರ್ಪಿತ ಮಾರ್ಗದರ್ಶನದ ಪ್ರತಿಫಲವಾಗಿದೆ ಎಂದು ಶಿಕ್ಷಣ ವಲಯದಲ್ಲಿ ಪ್ರಶಂಸೆ ವ್ಯಕ್ತವಾಗಿದೆ. ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೂ ಗುಣಮಟ್ಟದ ಸ್ಪರ್ಧಾತ್ಮಕ ಶಿಕ್ಷಣ ದೊರಕಬೇಕು ಎಂಬ ಉದ್ದೇಶದಿಂದ ಕಾರ್ಯನಿರ್ವಹಿಸುತ್ತಿರುವ ಕ್ರಿಯೇಟಿವ್ ಅಕಾಡೆಮಿ, ಪ್ರತಿಭಾವಂತ ವಿದ್ಯಾರ್ಥಿಗಳ ಭವಿಷ್ಯ ರೂಪಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿದೆ.

ಸಾಧನೆಗೈದ ವಿದ್ಯಾರ್ಥಿಗಳು, ಅವರ ಪಾಲಕರು ಹಾಗೂ ತರಬೇತಿ ನೀಡಿದ ಶಿಕ್ಷಕರನ್ನು ಕ್ರಿಯೇಟಿವ್ ಅಕಾಡೆಮಿಯ ಸಂಸ್ಥಾಪಕ ಅಧ್ಯಕ್ಷ ಡಾ. ರಮೇಶ ಉಳ್ಳಾಗಡ್ಡಿ ಅಭಿನಂದಿಸಿ, ಮುಂದಿನ ಶೈಕ್ಷಣಿಕ ಪಯಣಕ್ಕೂ ಶುಭ ಹಾರೈಸಿದ್ದಾರೆ.

### ರಾಜೀ ಸಂಧಾನದ ಮೂಲಕ ಪ್ರಕರಣ ಇತ್ಯರ್ಥಕ್ಕೆ ಸುವರ್ಣಾವಕಾಶ-ಸಾರ್ವಜನಿಕರು ಸದುಪಯೋಗಪಡಿಸಿಕೊಳ್ಳಲು ಕರೆ

# ಜು.11ರಂದು ರಾಷ್ಟ್ರೀಯ ಲೋಕ ಅದಾಲತ್

■ ವಿಜಯಸಾಕ್ಷಿ ಸುದ್ದಿ, ಗದಗ

ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ಜುಲೈ 11, 2026ರಂದು ಜಿಲ್ಲೆಯಾದ್ಯಂತ ರಾಷ್ಟ್ರೀಯ ಲೋಕ ಅದಾಲತ್ ಆಯೋಜಿಸಲಾಗಿದ್ದು, ಸಾರ್ವಜನಿಕರು ಹಾಗೂ ಪಕ್ಷಗಾರರು ತಮ್ಮ ವ್ಯಾಜ್ಯಗಳನ್ನು ರಾಜೀ ಸಂಧಾನದ ಮೂಲಕ ತ್ವರಿತವಾಗಿ ಇತ್ಯರ್ಥಪಡಿಸಿಕೊಳ್ಳುವಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಮನವಿ ಮಾಡಿದೆ.



ಲೋಕ ಅದಾಲತ್ ಮೂಲಕ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳುವುದರಿಂದ ನ್ಯಾಯಾಲಯದ ವೆಚ್ಚ, ಸಮಯ ಹಾಗೂ ಅನಗತ್ಯ ಆರ್ಥಿಕ ಹೊರೆ ತಪ್ಪುವುದರ ಜೊತೆಗೆ ಪರಸ್ಪರ ಬಾಂಧವ್ಯವನ್ನು ಉಳಿಸಿಕೊಳ್ಳಲು ಸಹ ಸಾಧ್ಯವಾಗಲಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷೆ ಶ್ರೀಮತಿ ನಾಗವೇಣಿ ತಿಳಿಸಿದ್ದಾರೆ.

> "ಲೋಕ ಅದಾಲತ್ ನ್ಯಾಯದ ವೇಗದ ದಾರಿ. ಪರಸ್ಪರ ಒಪ್ಪಂದದ ಮೂಲಕ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಂಡು ಸಮಯ, ಹಣ ಹಾಗೂ ಸಂಬಂಧಗಳನ್ನು ಉಳಿಸಿಕೊಳ್ಳುವ ಅಪರೂಪದ ಅವಕಾಶ ಇದಾಗಿದೆ."
> – **ಶ್ರೀಮತಿ ನಾಗವೇಣಿ,** ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಅಧ್ಯಕ್ಷರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ.

ಜಿಲ್ಲೆಯಲ್ಲಿ ಸಿವಿಲ್ ದಾವೆಗಳು, ಭೂಸ್ವಾಧೀನ ಪ್ರಕರಣಗಳು, ಬ್ಯಾಂಕ್ ವಸೂಲಾತಿ ಪ್ರಕರಣಗಳು, ದರಖಾಸ್ತು ಅರ್ಜಿಗಳು, ಕಾರ್ಮಿಕ ಪ್ರಕರಣಗಳು, ಎಂಎಂಆರ್‌ಡಿ ಪ್ರಕರಣಗಳು, ಚೆಕ್ ಬೌನ್ಸ್ ಪ್ರಕರಣಗಳು, ಮೋಟಾರು ವಾಹನ ಅಪಘಾತ ಪರಿಹಾರ ಪ್ರಕರಣಗಳು, ವೈವಾಹಿಕ ವ್ಯಾಜ್ಯಗಳು ಹಾಗೂ ರಾಜೀ ಆಗಲು ಅರ್ಹವಿರುವ ಕ್ರಿಮಿನಲ್ ಕಂಪೌಂಡಬಲ್ ಪ್ರಕರಣಗಳು ಸೇರಿದಂತೆ ಹಲವಾರು ಪ್ರಕರಣಗಳನ್ನು ರಾಜೀ ಸಂಧಾನಕ್ಕಾಗಿ ಗುರುತಿಸಲಾಗಿದೆ.

ಸಂಬಂಧಿತ ವಕೀಲರು ಹಾಗೂ ಪಕ್ಷಗಾರರಿಗೆ ರಾಜೀ ಸಂಧಾನದಿಂದ ಆಗುವ ಪ್ರಯೋಜನಗಳ ಕುರಿತು ಮುಂಚಿತವಾಗಿ ಮಾಹಿತಿ ನೀಡಿ, ಸೌಹಾರ್ದಯುತ ಪರಿಹಾರಕ್ಕೆ ಪ್ರೋತ್ಸಾಹಿಸಲಾಗುತ್ತಿದೆ. ಜುಲೈ 11ರಂದು ನಡೆಯುವ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ವಕೀಲರು, ಕಕ್ಷಿದಾರರು, ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಾರ್ವಜನಿಕರು ಸಕ್ರಿಯವಾಗಿ ಭಾಗವಹಿಸಿ ತಮ್ಮ ವ್ಯಾಜ್ಯಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸಿಕೊಳ್ಳುವಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.





ಗದಗ: ವೀರಶ್ರೇಷ್ಠ ಯೋಧ ಶ್ರೀ ಮಹಾರಾಣಾ ಪ್ರತಾಪ ಸಿಂಹರ 486ನೇ ಜಯಂತಿ ಅಂಗವಾಗಿ ನಗರದ ಅಂಡರ್ ಬ್ರಿಡ್ಜ್ ವೃತ್ತದಲ್ಲಿ ಗುರುವಾರ ವಿಶೇಷ ಪೂಜೆ ಸಲ್ಲಿಸಿ ಗೌರವ ನಮನ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಹಾರಾಣಾ ಪ್ರತಾಪ ಸಿಂಹರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಅವರ ದೇಶಭಕ್ತಿ, ಶೌರ್ಯ ಹಾಗೂ ತ್ಯಾಗವನ್ನು ಸ್ಮರಿಸಲಾಯಿತು. ಸಮಾಜದ ಮುಖಂಡರು ಮತ್ತು ಯುವಕರು ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಪುಷ್ಪಾರ್ಚನೆ ನೆರವೇರಿಸಿದರು.

ಕಾರ್ಯಕ್ರಮದಲ್ಲಿ ಗಣೇಶ್ ಸಿಂಗ್ ಬ್ಯಾಳಿ, ಭಗತ್ ಸಿಂಗ್ ರಜಪೂತ್, ತುಳಜಾ ರಾಮ್ ಸಿಂಗ್ ಕಾಟೆವಾಲ್, ಗಣೇಶ್ ಸಿಂಗ್ ಮಿಠಡೆ, ರಮೇಶ್ ಸಿಂಗ್ ಬ್ಯಾಳಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಎಚ್.ಕೆ. ಪಾಟೀಲರಿಗೆ ಸಚಿವ ಸ್ಥಾನಕ್ಕಾಗಿ ವಿಶೇಷ ಪೂಜೆ



■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಹಿರಿಯ ಕಾಂಗ್ರೆಸ್ ನಾಯಕ ಹಾಗೂ ಗದಗ ಶಾಸಕ ಡಾ. ಎಚ್.ಕೆ. ಪಾಟೀಲರಿಗೆ ಸಚಿವ ಸ್ಥಾನ ದೊರೆಯಲಿ ಎಂಬ ಆಶಯದೊಂದಿಗೆ ಗುರುವಾರ ಗದಗ ನಗರದ ಚಾವಡಿ ಕೂಟದಲ್ಲಿರುವ ಶ್ರೀ ಕರಿದೇವರು ದೇವಸ್ಥಾನದಲ್ಲಿ ಶ್ರೀ ಸೋಮನಾಥೇಶ್ವರನಿಗೆ ಮಹಾರುದ್ರಾಭಿಷೇಕ ಪೂಜೆ ನೆರವೇರಿಸಲಾಯಿತು.

14ನೇ ವಾರ್ಡ್‌ನ ಯುವ ಕಾಂಗ್ರೆಸ್ ಮುಖಂಡ ನವೀನ್ ಜಾಲಿಹಾಳ ಅವರ ನೇತೃತ್ವದಲ್ಲಿ ನಡೆದ ಈ ಧಾರ್ಮಿಕ ಕಾರ್ಯಕ್ರಮದಲ್ಲಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು.

ಡಾ. ಎಚ್.ಕೆ. ಪಾಟೀಲರು ರಾಜ್ಯ ರಾಜಕಾರಣದಲ್ಲಿ ಅನುಭವಿಗಳಾಗಿದ್ದು, ಜಿಲ್ಲೆ ಹಾಗೂ ರಾಜ್ಯದ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡಿದ್ದಾರೆ. ಅವರಿಗೆ ಸಚಿವ ಸಂಪುಟದಲ್ಲಿ ಸ್ಥಾನ ದೊರೆತು ಜಿಲ್ಲೆಯ ಜನರ ಆಶಯ ಈಡೇರಲಿ ಎಂದು ನವೀನ್ ಜಾಲಿಹಾಳ ಪ್ರಾರ್ಥಿಸಿದರು.

### ಜ್ಞಾನ ವಿಕಾಸ ಕೇಂದ್ರದಿಂದ ಮಹಿಳಾ ಕಾನೂನು ಅರಿವು ಕಾರ್ಯಕ್ರಮ

# ಮಹಿಳೆಯರಿಗೆ ಕಾನೂನು ಅರಿವು ಅವಶ್ಯಕ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಕಾನೂನಿನ ಜ್ಞಾನದಿಂದ ಅನ್ಯಾಯಗಳನ್ನು ಎದುರಿಸಲು ಸಾಧ್ಯವಾಗುತ್ತದೆ. ಮಹಿಳೆಯರು ತಮ್ಮ ಹಕ್ಕುಗಳ ಬಗ್ಗೆ ಅರಿವು ಹೊಂದಿ ದೌರ್ಜನ್ಯ ಮತ್ತು ಕಾನೂನುಬಾಹಿರ ಚಟುವಟಿಕೆಗಳ ವಿರುದ್ಧ ಧ್ವನಿ ಎತ್ತಬೇಕು ಎಂದು ನ್ಯಾಯವಾದಿ ದಾವಲಸಾಬ ತಾಳಿಕೋಟಿ ಹೇಳಿದರು.

ಪಟ್ಟಣದ ಶಿವಾಜಿಪೇಟೆಯಲ್ಲಿ ಜ್ಞಾನ ವಿಕಾಸ ಕೇಂದ್ರದ ವತಿಯಿಂದ ಆಯೋಜಿಸಿದ್ದ ಮಹಿಳಾ ಕಾನೂನುಗಳ ಅರಿವು ಮತ್ತು ನೆರವು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಹಿಳೆಯರ ಗೌರವ, ಸುರಕ್ಷತೆ ಹಾಗೂ ಸಮಾನತೆಯನ್ನು ಕಾಪಾಡುವಲ್ಲಿ ಕಾನೂನು ಪ್ರಮುಖ ಪಾತ್ರ ವಹಿಸುತ್ತಿದ್ದು, ಶಿಕ್ಷಣ, ಉದ್ಯೋಗ, ಆಸ್ತಿ, ಮದುವೆ ಹಾಗೂ ವಿಚ್ಛೇದನ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಮಹಿಳೆಯರ



ಹಕ್ಕುಗಳನ್ನು ಕಾನೂನು ಸ್ಪಷ್ಟವಾಗಿ ಗುರುತಿಸಿದೆ ಎಂದು ಹೇಳಿದರು.

ಗೃಹಹಿಂಸೆ ತಡೆ ಕಾಯ್ದೆ–2005, ಲೈಂಗಿಕ ಕಿರುಕುಳ ತಡೆ ಕಾಯ್ದೆ–2013, ಸಮಾನ ವೇತನ ಕಾಯ್ದೆ ಹಾಗೂ ವರದಕ್ಷಿಣೆ ನಿಷೇಧ ಕಾಯ್ದೆ ಸೇರಿದಂತೆ ವಿವಿಧ ಕಾನೂನುಗಳ ಕುರಿತು ಸವಿಸ್ತಾರ ಮಾಹಿತಿ ನೀಡಿದರು. ಅನ್ಯಾಯ ಸಂಭವಿಸಿದಾಗ ಪೊಲೀಸ್ ಠಾಣೆ, ನ್ಯಾಯಾಲಯ, ಮಹಿಳಾ ಆಯೋಗ ಹಾಗೂ ಕಾನೂನು ಸೇವಾ ಪ್ರಾಧಿಕಾರದ ಮೂಲಕ ನ್ಯಾಯ ಪಡೆಯಬಹುದಾಗಿದೆ ಎಂದು ತಿಳಿಸಿದರು.

ಜ್ಞಾನ ವಿಕಾಸ ಕೇಂದ್ರದ ಅಧ್ಯಕ್ಷೆ ರೇಣುಕಾ ಗೌಡರ, ಸೇವಾ ಪ್ರತಿನಿಧಿ ಕವಿತಾ ಕೋಟಗಿ, ಸಮನ್ವಯಾಧಿಕಾರಿ ಲಕ್ಷ್ಮೀ, ಸದಸ್ಯರಾದ ರೇಖಾ ಎಲಿಗಾರ, ಅನ್ನಪೂರ್ಣ ಕಂಬಳಿ, ಗಂಗಮ್ಮ, ಲಾಲಬಿ ತಾಳಿಕೋಟಿ, ವಿಜಯಲಕ್ಷ್ಮಿ, ಜಯಶ್ರೀ, ಪಾರಮ್ಮ ಬೊಯಿಟೆ ಸೇರಿದಂತೆ ಹಲವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಶ್ರೀನಿವಾಸ ಮಾನೆಗೆ ಸಚಿವ ಸ್ಥಾನ ನೀಡಲು ಮನವಿ



■ ವಿಜಯಸಾಕ್ಷಿ ಸುದ್ದಿ, ಗದಗ

ಹಾನಗಲ್ ಕ್ಷೇತ್ರದ ಶಾಸಕ ಶ್ರೀನಿವಾಸ ವಿಷ್ಣುರಾವ್ ಮಾನೆಯವರಿಗೆ ಸಚಿವ ಸ್ಥಾನ ನೀಡುವ ಮೂಲಕ ಮರಾಠಾ ಸಮುದಾಯಕ್ಕೆ ಸಚಿವ ಸಂಪುಟದಲ್ಲಿ ಪ್ರಾತಿನಿಧ್ಯ ಕಲ್ಪಿಸಬೇಕು ಎಂದು ಮರಾಠಾ ವಿದ್ಯಾವರ್ಧಕ ಸಂಘ (ರಿ) ಗದಗ–ಬೆಟಗೇರಿ ಒತ್ತಾಯಿಸಿದೆ.

ಸಂಘದ ಅಧ್ಯಕ್ಷ ಅರುಣಕುಮಾರ ಬಿ. ಚವ್ಹಾಣ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಈ ಕುರಿತು ನಿರ್ಣಯ ಕೈಗೊಳ್ಳಲಾಯಿತು. ಕೋವಿಡ್ ಸಂಕಷ್ಟದ ಸಂದರ್ಭದಲ್ಲಿ ಜನಪರ ಸೇವೆ ಸಲ್ಲಿಸಿದ ಹಾಗೂ ಅಭಿವೃದ್ಧಿ ದೃಷ್ಟಿಕೋನ ಹೊಂದಿರುವ ಯುವ ನಾಯಕರಾದ ಶ್ರೀನಿವಾಸ ಮಾನೆಯವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಮನವಿ ಮಾಡಲಾಗಿದೆ.

ಸಭೆಯಲ್ಲಿ ಸಂಘದ ಪದಾಧಿಕಾರಿಗಳು ಹಾಗೂ ಸಮಾಜದ ಮುಖಂಡರು ಉಪಸ್ಥಿತರಿದ್ದರು.

ಖೇತ್ ಬಚಾವೋ ಅಭಿಯಾನ ಅಂಗವಾಗಿ ಕಿಸಾನ ಗೋಷ್ಠಿ; ಮರುಭೂಮೀಕರಣ ತಡೆಗೆ ಜಾಗೃತಿ

# ಮಣ್ಣು-ನೀರು ಸಂರಕ್ಷಣೆಗೆ ರೈತರು ಮುಂದಾಗಬೇಕು



"ಇಂದಿನ ಮಣ್ಣು ಮತ್ತು ನೀರಿನ ಸಂರಕ್ಷಣೆಯೇ ನಾಳಿನ ಕೃಷಿಗೆ ಭದ್ರ ಬುನಾದಿ; ಬರ ಎದುರಿಸಲು ರೈತರು ಈಗಿನಿಂದಲೇ ಸಿದ್ಧರಾಗಬೇಕು."
– ಸ್ಫೂರ್ತಿ ಜಿ.ಎಸ್., ಉಪ ಕೃಷಿ ನಿರ್ದೇಶಕಿ

**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ರೈತರು ತಮ್ಮ ಜಮೀನುಗಳಲ್ಲಿ ಮಣ್ಣು ಮತ್ತು ನೀರಿನ ಸಂರಕ್ಷಣೆಗೆ ಆದ್ಯತೆ ನೀಡಿ, ಭವಿಷ್ಯದಲ್ಲಿ ಎದುರಾಗಬಹುದಾದ ಬರ ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸಲು ಸಜ್ಜಾಗಬೇಕು ಎಂದು ಉಪ ಕೃಷಿ ನಿರ್ದೇಶಕಿ ಸ್ಫೂರ್ತಿ ಜಿ.ಎಸ್. ಹೇಳಿದರು.

ತಾಲೂಕಿನ ಬೆಳ್ಳಟ್ಟಿ ಗ್ರಾಮದ ಎಪಿಎಂಸಿ ಸಭಾಭವನದಲ್ಲಿ ಕೃಷಿ ಇಲಾಖೆ ವತಿಯಿಂದ ಖೇತ್ ಬಚಾವೋ ಅಭಿಯಾನ-ಆತ್ಮ ಯೋಜನೆಯಡಿ ಹಮ್ಮಿಕೊಂಡಿದ್ದ ಕಿಸಾನ ಗೋಷ್ಠಿ ಹಾಗೂ ಮರುಭೂಮೀಕರಣ ಮತ್ತು ಬರ ತಡೆಗಟ್ಟುವಿಕೆ ವಿಶ್ವ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಜಂಟಿ ಕೃಷಿ ನಿರ್ದೇಶಕಿ ಚೇತನಾ ಪಾಟೀಲ, ರೈತರು ಸಾಧ್ಯವಾದಷ್ಟು ಸಾವಯವ ಕೃಷಿಯತ್ತ ಒಲವು ತೋರಬೇಕು. ರಾಸಾಯನಿಕ ಗೊಬ್ಬರಗಳ ಅತಿಯಾದ ಬಳಕೆಯಿಂದ ಭೂಮಿಯ ಫಲವತ್ತತೆ ಕುಂಠಿತವಾಗುತ್ತಿದ್ದು, ಮುಂದಿನ ಪೀಳಿಗೆಗೆ ಫಲವತ್ತಾದ ಭೂಮಿಯನ್ನು ಉಳಿಸಿಕೊಡುವ ಜವಾಬ್ದಾರಿ ಎಲ್ಲರ ಮೇಲಿದೆ ಎಂದು ಹೇಳಿದರು.

ಎಲ್ಲ ರೈತರು ಕಡ್ಡಾಯವಾಗಿ ಎಫ್‌ಐಡಿ (ಈಖಆ) ಮಾಡಿಸಿಕೊಳ್ಳಬೇಕು. ಅಗತ್ಯಕ್ಕೆ ಅನುಗುಣವಾಗಿ ಯೂರಿಯಾ ಸೇರಿದಂತೆ ರಸಗೊಬ್ಬರಗಳನ್ನು ಎಫ್‌ಐಡಿ ಮೂಲಕವೇ ಪಡೆಯುವ ವ್ಯವಸ್ಥೆಗೆ ಸಹಕರಿಸಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ 2025-26ನೇ ಸಾಲಿನ ಆತ್ಮ ಯೋಜನೆಯಡಿ ತಾಲೂಕು ಮಟ್ಟದ ಶ್ರೇಷ್ಠ ಕೃಷಿಕ ಪ್ರಶಸ್ತಿ ಪಡೆದ ರೈತರನ್ನು ಸನ್ಮಾನಿಸಲಾಯಿತು.

ಮೋಹನ ಗುತ್ತೆಮ್ಮನವರ, ಎನ್.ಎಚ್. ಬಂಡಿ, ಬಸವರಾಜ ನಾವಿ ಮಾತನಾಡಿದರು. ಸಹಾಯಕ ಕೃಷಿ ನಿರ್ದೇಶಕ ಶಿವಕುಮಾರ ಕಾಶಪ್ಪನವರ, ಮಹೇಶ ಬಡ್ನಿ, ಚಂದ್ರಶೇಖರಗೌಡ ಎಸ್.ಎನ್., ಮಂಜುನಾಥ ಭರಮಗೌಡ್ರ, ಆರ್.ಸಿ. ಚಾಕಲಬ್ಬಿ, ಎಂ.ಎಸ್. ಪೂಜಾರ, ಡಿ.ಕೆ. ಅಚಲಕರ್, ನೀಲನಗೌಡ ಪಾಟೀಲ, ಶ್ರೀನಿವಾಸ ಅಳವಂಡಿ, ಅಶೋಕ ಕಪ್ಲಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಜನರ ಬದುಕು ಬದಲಿಸಿದ ಯೋಜನೆಗಳಿಗೆ ಬಿಜೆಪಿ-ಜೆಡಿಎಸ್‌ನಿಂದ ಮಸಿ ಬಳಿಯುವ ಯತ್ನ: ಅಶೋಕ ಮಂದಾಲಿ ಆರೋಪ

# ಗ್ಯಾರಂಟಿಗಳ ಯಶಸ್ಸು ಸಹಿಸದೇ ಅಪಪ್ರಚಾರ

**■ವಿಜಯಸಾಕ್ಷಿ ಸುದ್ದಿ, ಗದಗ**

ಕಾಂಗ್ರೆಸ್ ಸರ್ಕಾರ ಜಾರಿಗೊಳಿಸಿರುವ ಪಂಚ ಗ್ಯಾರಂಟಿ ಯೋಜನೆಗಳ ಯಶಸ್ಸನ್ನು ಸಹಿಸಲಾಗದೆ ಬಿಜೆಪಿ ಹಾಗೂ ಜೆಡಿಎಸ್ ಪಕ್ಷಗಳು ಅಪಪ್ರಚಾರದ ಮೂಲಕ ಮಸಿ ಬಳಿಯಲು ಪ್ರಯತ್ನಿಸುತ್ತಿವೆ ಎಂದು ಗದಗ ಜಿಲ್ಲಾ ಪ್ರಚಾರ ಸಮಿತಿ ಅಧ್ಯಕ್ಷ ಹಾಗೂ ಗದಗ ತಾಲೂಕು ಪಂಚ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ಆರೋಪಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, 7 ಕೋಟಿ ಕನ್ನಡಿಗರ ಆಶೀರ್ವಾದದಿಂದ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರ್ಕಾರ ಚುನಾವಣಾ ಪೂರ್ವದಲ್ಲಿ ನೀಡಿದ್ದ ಭರವಸೆಯಂತೆ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದ್ದು, ರಾಜ್ಯದ ಬಡ ಹಾಗೂ ಮಧ್ಯಮ ವರ್ಗದ ಕುಟುಂಬಗಳಿಗೆ ಆರ್ಥಿಕ ಬಲ ತುಂಬಿದೆ ಎಂದು ತಿಳಿಸಿದ್ದಾರೆ. 2026-27ನೇ ಸಾಲಿನ ಬಜೆಟ್‌ನಲ್ಲಿ ಗ್ಯಾರಂಟಿ ಯೋಜನೆಗಳಿಗೆ 51,286 ಕೋಟಿ ರೂ. ಮೀಸಲಿಡಲಾಗಿದ್ದು, ಪ್ರತಿ ತಾಲೂಕಿಗೆ ಸರಾಸರಿ 220 ಕೋಟಿ ರೂ.ಗಳಷ್ಟು ಆರ್ಥಿಕ ಚಟುವಟಿಕೆ ತಲುಪಿಸುತ್ತಿದೆ ಎಂದು ಹೇಳಿದ್ದಾರೆ.

ಗ್ಯಾರಂಟಿ ಯೋಜನೆಗಳಿಂದ ರಾಜ್ಯ ಆರ್ಥಿಕವಾಗಿ ದಿವಾಳಿಯಾಗಲಿದೆ ಎಂಬ ವಿಪಕ್ಷಗಳ ಟೀಕೆಗೆ ಕರ್ನಾಟಕದ ಆರ್ಥಿಕ ಸಾಧನೆಗಳೇ ಉತ್ತರವಾಗಿವೆ. ಜಿಎಸ್‌ಡಿಪಿ ಬೆಳವಣಿಗೆಯಲ್ಲಿ ರಾಜ್ಯ ಶೇ.10.2ರೊಂದಿಗೆ ದೇಶದಲ್ಲೇ ಮೊದಲ ಸ್ಥಾನದಲ್ಲಿದ್ದು, ಜಿಎಸ್‌ಟಿ ಸಂಗ್ರಹದಲ್ಲಿ ಎರಡನೇ ಹಾಗೂ ತಲಾ ಆದಾಯದಲ್ಲಿ ಮೂರನೇ ಸ್ಥಾನದಲ್ಲಿದೆ ಎಂದು ಅವರು ತಿಳಿಸಿದ್ದಾರೆ.

ಗೃಹಲಕ್ಷ್ಮೀ ಯೋಜನೆಯಡಿ 1.24 ಕೋಟಿ ಮಹಿಳೆಯರಿಗೆ ಪ್ರತಿ ತಿಂಗಳು 2 ಸಾವಿರ ರೂ.



ನೀಡಲಾಗುತ್ತಿದ್ದು, 17 ಜಿಲ್ಲೆಗಳಲ್ಲಿ ಮೃತಪಟ್ಟವರು ಹಾಗೂ ಆದಾಯ ತೆರಿಗೆ-ಜಿಎಸ್‌ಟಿ ಪಾವತಿಸುವ ಅನರ್ಹ 1.12 ಲಕ್ಷ ಫಲಾನುಭವಿಗಳನ್ನು ಮಾತ್ರ ಯೋಜನೆಯಿಂದ ಕೈಬಿಡಲಾಗಿದೆ. ಇದರಲ್ಲಿ 67,869 ಮಂದಿ ಮೃತಪಟ್ಟವರಾಗಿದ್ದು, 41,848 ಮಂದಿ ಐಟಿ ಹಾಗೂ ಜಿಎಸ್‌ಟಿ ಪಾವತಿದಾರರಾಗಿದ್ದಾರೆ. ಮನೆಯ ಹಿರಿಯ ಮಹಿಳೆ ಮೃತಪಟ್ಟರೆ ಯೋಜನೆ ಸ್ಥಗಿತಗೊಳ್ಳುವುದಿಲ್ಲ. ಹೊಸ ಮಹಿಳಾ ಮುಖ್ಯಸ್ಥರ ಹೆಸರನ್ನು ಪಡಿತರ ಚೀಟಿಯಲ್ಲಿ ನವೀಕರಿಸಿ ಮರು ಅರ್ಜಿ ಸಲ್ಲಿಸಿದರೆ ಹಣ ಮರುಪ್ರಾರಂಭವಾಗುತ್ತದೆ. ಈ ಸತ್ಯವನ್ನು ಮುಚ್ಚಿಟ್ಟು ಬಿಜೆಪಿ ಜನರಲ್ಲಿ ಗೊಂದಲ ಸೃಷ್ಟಿಸುತ್ತಿದೆ ಎಂದು ಆರೋಪಿಸಿದ್ದಾರೆ.

ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳು ಕೇವಲ ಚುನಾವಣಾ ಭರವಸೆಗಳಾಗಿ ಉಳಿಯದೆ ಜನರ ಬದುಕು ಬದಲಿಸುವ ಯೋಜನೆಗಳಾಗಿ ರೂಪುಗೊಂಡಿವೆ. ಗೃಹಲಕ್ಷ್ಮೀ ಯೋಜನೆಯಿಂದ ಕೋಟ್ಯಂತರ ಮಹಿಳೆಯರು ಆರ್ಥಿಕವಾಗಿ ಸಬಲರಾಗಿದ್ದು, ಕುಟುಂಬದ ಉಳಿತಾಯ ಹಾಗೂ ಆರ್ಥಿಕ ಸ್ಥಿತಿಯಲ್ಲಿ ಸುಧಾರಣೆ ಕಂಡುಬಂದಿದೆ.

"ಗ್ಯಾರಂಟಿಗಳು ಕೇವಲ ಚುನಾವಣಾ ಭರವಸೆಗಳಲ್ಲ; ಕೋಟ್ಯಂತರ ಕುಟುಂಬಗಳ ಬದುಕು ಬದಲಿಸಿದ ಜನಪರ ಯೋಜನೆಗಳು. ಅವುಗಳ ಯಶಸ್ಸು ಸಹಿಸಲಾಗದೆ ಬಿಜೆಪಿ-ಜೆಡಿಎಸ್ ಅಪಪ್ರಚಾರ ನಡೆಸುತ್ತಿವೆ."
– ಅಶೋಕ ಮಂದಾಲಿ
ಅಧ್ಯಕ್ಷರು, ಗದಗ ಜಿಲ್ಲಾ ಪ್ರಚಾರ ಸಮಿತಿ ಹಾಗೂ ಗದಗ ತಾಲೂಕು ಪಂಚ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರ

ಶೇ.89ರಷ್ಟು ಫಲಾನುಭವಿಗಳ ಕುಟುಂಬ ಸಂಬಂಧಗಳಲ್ಲಿ ಧನಾತ್ಮಕ ಬದಲಾವಣೆ ಕಂಡುಬಂದಿದೆ ಎಂದು ವಿವಿಧ ಅಧ್ಯಯನಗಳು ಸೂಚಿಸಿವೆ ಎಂದು ಅವರು ಹೇಳಿದ್ದಾರೆ.

ಶಕ್ತಿ ಯೋಜನೆಯಡಿ ಮಹಿಳೆಯರಿಗೆ ಉಚಿತ ಬಸ್ ಪ್ರಯಾಣ ಸೌಲಭ್ಯ ಕಲ್ಪಿಸಿರುವುದು ದೇಶಕ್ಕೇ ಮಾದರಿಯಾಗಿದೆ. ಈ ಯೋಜನೆಯನ್ನು ಅಧ್ಯಯನ ಮಾಡಲು ಆಂಧ್ರಪ್ರದೇಶದ ಅಧಿಕಾರಿಗಳು ಕರ್ನಾಟಕಕ್ಕೆ ಭೇಟಿ ನೀಡಿದ್ದಾರೆ. ಇದುವರೆಗೆ 564 ಕೋಟಿಗೂ ಅಧಿಕ ಮಹಿಳಾ ಪ್ರಯಾಣಿಕರು ಉಚಿತ ಪ್ರಯಾಣದ ಸೌಲಭ್ಯ ಪಡೆದಿದ್ದು, ಮಹಿಳೆಯರ ಸಂಚಾರ ಸ್ವಾತಂತ್ರ್ಯ ಮತ್ತು ಆತ್ಮವಿಶ್ವಾಸ ಹೆಚ್ಚಲು ಕಾರಣವಾಗಿದೆ. ವಾರಕ್ಕೆ ಸುಮಾರು 1,000 ರೂ.ವರೆಗೆ ಪ್ರಯಾಣ ವೆಚ್ಚ ಉಳಿತಾಯವಾಗುತ್ತಿದೆ ಎಂದು ಶೇ.80ಕ್ಕೂ ಹೆಚ್ಚು ಮಹಿಳೆಯರು ಅಭಿಪ್ರಾಯಪಟ್ಟಿದ್ದಾರೆ. ದಿನಗೂಲಿ ಕಾರ್ಮಿಕ ಮಹಿಳೆಯರಿಗೆ ಈ ಯೋಜನೆ ಹೆಚ್ಚು ಅನುಕೂಲವಾಗಿದೆ ಎಂದು ತಿಳಿಸಿದ್ದಾರೆ.

2023ರಿಂದ ಇಲ್ಲಿಯವರೆಗೆ ಪಂಚ ಗ್ಯಾರಂಟಿ ಯೋಜನೆಗಳಿಗೆ ಒಟ್ಟು 1.4 ಲಕ್ಷ ಕೋಟಿ ರೂ. ಅನುದಾನ ನೀಡಲಾಗಿದೆ. ಗೃಹಜ್ಯೋತಿ ಯೋಜನೆಗೆ 28,657 ಕೋಟಿ ರೂ., ಗೃಹಲಕ್ಷ್ಮೀ ಯೋಜನೆಗೆ 74,180 ಕೋಟಿ ರೂ., ಶಕ್ತಿ ಯೋಜನೆಗೆ 18,625 ಕೋಟಿ ರೂ., ಅನ್ನಭಾಗ್ಯ ಯೋಜನೆಗೆ 20,211 ಕೋಟಿ ರೂ. ಹಾಗೂ ಯುವನಿಧಿ ಯೋಜನೆಗೆ 1,099 ಕೋಟಿ ರೂ. ವೆಚ್ಚ ಮಾಡಲಾಗಿದೆ. ಗೃಹಜ್ಯೋತಿಯಿಂದ 1.64 ಕೋಟಿ ಕುಟುಂಬಗಳು, ಅನ್ನಭಾಗ್ಯದಿಂದ 4.21 ಕೋಟಿ ಫಲಾನುಭವಿಗಳು ಹಾಗೂ ಯುವನಿಧಿಯಿಂದ 2.58 ಲಕ್ಷ ಪದವೀಧರರು ಮತ್ತು ಡಿಪ್ಲೊಮಾ ವಿದ್ಯಾರ್ಥಿಗಳು ಪ್ರಯೋಜನ ಪಡೆದಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ.

ಕೇಂದ್ರ ಸರ್ಕಾರದ ಬೆಲೆ ಏರಿಕೆ ನೀತಿಯಿಂದ ಜನಸಾಮಾನ್ಯರು ಸಂಕಷ್ಟ ಎದುರಿಸುತ್ತಿರುವ ಸಂದರ್ಭದಲ್ಲಿ ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳು ಜನರಿಗೆ ಆರ್ಥಿಕ ಆಸರೆಯಾಗಿವೆ. ರಾಜ್ಯಪಾಲ ತಾವರಚಂದ್ ಗೆಹ್ಲೋಟ್ ಕೂಡ ಗ್ಯಾರಂಟಿ ಯೋಜನೆಗಳಿಂದ 1.2 ಕೋಟಿ ಕುಟುಂಬಗಳು ಬಡತನ ರೇಖೆಯಿಂದ ಹೊರಬಂದು ಮಧ್ಯಮ ವರ್ಗಕ್ಕೆ ಸೇರ್ಪಡೆಯಾಗಿವೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ ಎಂದು ಅಶೋಕ ಮಂದಾಲಿ ತಿಳಿಸಿದ್ದಾರೆ.

ಮಹಿಳಾ ಸಬಲೀಕರಣ, ಕುಟುಂಬಗಳ ಆರ್ಥಿಕ ಭದ್ರತೆ ಹಾಗೂ ಸಾಮಾಜಿಕ ಅಭಿವೃದ್ಧಿಗೆ ಗೃಹಲಕ್ಷ್ಮೀ ಮತ್ತು ಶಕ್ತಿ ಯೋಜನೆಗಳು ಸಂಜೀವಿನಿಯಾಗಿದ್ದು, ಗ್ಯಾರಂಟಿ ಯೋಜನೆಗಳ ಯಶಸ್ಸು ಕಂಡು ರಾಜಕೀಯ ಭಯ ಮತ್ತು ಹೊಟ್ಟೆಕಿಚ್ಚಿನಿಂದ ಬಿಜೆಪಿ-ಜೆಡಿಎಸ್ ನಾಯಕರು ಅಪಪ್ರಚಾರ ನಡೆಸುತ್ತಿದ್ದಾರೆ ಎಂದು ಅವರು ಆರೋಪಿಸಿದ್ದಾರೆ.

ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ಮಹಿಳೆಯರಿಂದ 33 ಹಾಡುಗಳ ಗಾಯನ

# ಅಧಿಕ ಮಾಸದ ಭಜನೆ ಸಂಪನ್ನ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ಅನಸೂಯಾ ಮಹಿಳಾ ಮಂಡಳದ ವತಿಯಿಂದ ಕಳೆದ ಒಂದು ತಿಂಗಳಿನಿಂದ ನಡೆಯುತ್ತಿದ್ದ ಅಧಿಕ ಮಾಸದ ಭಜನಾ ಕಾರ್ಯಕ್ರಮ ಗುರುವಾರ ಸಂಪನ್ನಗೊಂಡಿತು.



ಈ ಸಂದರ್ಭದಲ್ಲಿ ಮಾತನಾಡಿದ ಸಂಧ್ಯಾ ಕುಲಕರ್ಣಿ, "ಅಧಿಕ ಮಾಸದಲ್ಲಿ ಮಾಡುವ ದಾನ, ಧರ್ಮ ಹಾಗೂ ಭಜನೆಗಳಿಗೆ ವಿಶೇಷ ಮಹತ್ವವಿದೆ. ನಮ್ಮ ಹಿರಿಯರು ರೂಢಿಸಿಕೊಂಡಿರುವ ಈ ಆಚರಣೆಗಳು ಕುಟುಂಬದಲ್ಲಿ ಶಾಂತಿ, ನೆಮ್ಮದಿ ಮತ್ತು ಧಾರ್ಮಿಕ ಭಾವನೆಯನ್ನು ಬೆಳೆಸುತ್ತವೆ" ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ನಿಖಿತಾ ಗ್ರಾಮಪುರೋಹಿತ ಅವರು ಅಧಿಕ ಮಾಸದ ಕಥಾಮೃತ ವಾಚನ ಮಾಡಿದರು. ಬಳಿಕ ಮಹಿಳೆಯರು 33 ಭಕ್ತಿಗೀತೆಗಳನ್ನು ಹಾಡಿ, ಕೋಲಾಟ ಆಡಿ ಸಂಭ್ರಮಿಸಿದರು.

ಭಾರತಿಬಾಯಿ ಗ್ರಾಮಪುರೋಹಿತ, ಅರ್ಚನಾ ಕುಲಕರ್ಣಿ, ಜಯಶ್ರೀ ಗ್ರಾಮಪುರೋಹಿತ, ಪದ್ಮಾ ಕುಲಕರ್ಣಿ, ರಾಜಶ್ರೀ ಕುಲಕರ್ಣಿ, ಡಾ. ಸಪ್ನಾ ಕಾಳೆ, ಸನ್ಮತಿ ಸದರಜೋಷಿ, ಅನಿತಾ ಗ್ರಾಮಪುರೋಹಿತ, ದೀಪಾ ಕುಲಕರ್ಣಿ, ಪರಿಮಳಾ ಗ್ರಾಮಪುರೋಹಿತ, ಶೋಭಾ ಸೂರಭಟ್ಟನವರ, ವಿದ್ಯಾ ಗ್ರಾಮಪುರೋಹಿತ, ಸುಪ್ರಿಯಾ ಉಡುಪಿ ಸೇರಿದಂತೆ ಅನೇಕರು ಭಾಗವಹಿಸಿದ್ದರು.

138ನೇ ಜಾತ್ರಾ ಮಹೋತ್ಸವಕ್ಕೆ ಚಾಲನೆ; ಪಂಚಾಕ್ಷರ ಶಿವಾಚಾರ್ಯ ಶ್ರೀಗಳ ನುಡಿ

# ಹಠಯೋಗಿ ಕೊಟ್ಟೂರೇಶ್ವರ ಪುರಾಣ ಜೀವನಕ್ಕೆ ದಾರಿದೀಪ

**■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

"ಹಠಯೋಗಿ ಕೊಟ್ಟೂರೇಶ್ವರ ಪುರಾಣ ಗ್ರಂಥವು ಮೌಲ್ಯಯುತವಾಗಿದ್ದು, ಅದರಲ್ಲಿರುವ ಜೀವನ ತತ್ವಗಳು ಮಾನವ ಬದುಕಿಗೆ ದಾರಿದೀಪವಾಗಿವೆ" ಎಂದು ಅಡ್ನೂರ ಹಾಗೂ ಗದಗ ಮಠದ ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.

ಲಕ್ಕುಂಡಿ ಸಮೀಪದ ಹರ್ಲಾಪೂರದ ಕೊಟ್ಟೂರೇಶ್ವರ ಮಠದ 138ನೇ ಜಾತ್ರಾ ಮಹೋತ್ಸವ ಹಾಗೂ ಪುರಾಣ ಪ್ರಾರಂಭೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕೊಟ್ಟೂರೇಶ್ವರರ ಜೀವನ ಚರಿತ್ರೆಯಲ್ಲಿರುವ ಆದರ್ಶಗಳು



ಸಮಾಜಕ್ಕೆ ಮಾರ್ಗದರ್ಶನ ನೀಡುವಂತಿವೆ ಎಂದರು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಬಿಜೆಪಿ ರಾಜ್ಯ ಓಬಿಸಿ ಘಟಕದ ಕಾರ್ಯದರ್ಶಿ ರವಿ ದಂಡಿನ, ಸಂಸ್ಕೃತಿ, ಸಂಪ್ರದಾಯ ಹಾಗೂ ಧಾರ್ಮಿಕ ಮೌಲ್ಯಗಳ ಉಳಿವಿಗೆ ಮಠ-ಮಂದಿರಗಳ ಪಾತ್ರ ಮಹತ್ವದ್ದಾಗಿದೆ ಎಂದು ಹೇಳಿದರು.

ಮಲ್ಲಸಮುದ್ರದ ಓಂಕಾರೇಶ್ವರ ಮಠದ ಫಕೀರೇಶ್ವರ ಮಹಾಸ್ವಾಮಿಗಳು, ಕೊತಬಾಳದ ಗಂಗಾಧರ ಮಹಾಸ್ವಾಮಿಗಳು ಹಾಗೂ ಮಹಾಲಿಂಗಪುರದ ಚನ್ನವೀರ ಶ್ರೀಗಳು ಆಶೀರ್ವಚನ ನೀಡಿದರು. ಪುರಾಣ ಪ್ರವಚನಕಾರ ಕೀರ್ತನ ಕೇಸರಿ ಗುರುನಾಥ ಶಾಸ್ತ್ರಿಗಳು ಹಠಯೋಗಿ ಕೊಟ್ಟೂರೇಶ್ವರ ಪುರಾಣ ಪ್ರವಚನಕ್ಕೆ ಚಾಲನೆ ನೀಡಿದರು.

ಇದೇ ಸಂದರ್ಭದಲ್ಲಿ ಫಕೀರೇಶ್ವರ ಮಹಾಸ್ವಾಮಿಗಳಿಗೆ "ಭಾವೈಕ್ಯತೆಯ ಸಿರಿ" ಪ್ರಶಸ್ತಿ ಪ್ರದಾನ ಮಾಡಲಾಯಿತು. ಸಮಾಜಮುಖಿ ಸೇವೆ ಸಲ್ಲಿಸಿದ ಹಲವು ಗಣ್ಯರನ್ನು ಸನ್ಮಾನಿಸಲಾಯಿತು.

443ನೇ ದಿನ 110 ರೋಗಿಗಳಿಗೆ ಉಚಿತ ಉಪಹಾರ ನೀಡಿದ ದರ್ಶನ್ ಹೋಟೆಲ್ ಕುಟುಂಬ

# ಅನ್ನದಾನದಲ್ಲಿ ಹೊಸ ಮೈಲಿಗಲ್ಲು

**■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಪಟ್ಟಣದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯ ಒಳರೋಗಿಗಳಿಗೆ ಉಚಿತ ಉಪಹಾರ ವಿತರಿಸುವ ಸೇವಾ ಕಾರ್ಯ 443ನೇ ದಿನಕ್ಕೂ ಯಶಸ್ವಿಯಾಗಿ ಮುಂದುವರಿದಿದ್ದು, ಗುರುವಾರ ಒಂದೇ ದಿನದಲ್ಲಿ ಅತಿ ಹೆಚ್ಚು 110 ಒಳರೋಗಿಗಳಿಗೆ ಉಚಿತ ಉಪಹಾರ ನೀಡಲಾಯಿತು.

ರಾಮನಗರದ ದರ್ಶನ್ ಹೋಟೆಲ್ ಮಾಲೀಕ ಎಸ್.ಎಂ. ಗಂಗಾಧರಯ್ಯ, ಅವರ ಕುಟುಂಬ ಸದಸ್ಯರು ಹಾಗೂ ಆಪ್ತ ಸ್ನೇಹಿತರ ಬಳಗದ ಸಹಯೋಗದಲ್ಲಿ ಈ ಸೇವಾ ಕಾರ್ಯ ನಡೆಯುತ್ತಿದೆ. 2025ರ ಮಾರ್ಚ್ 31ರಂದು ಆರಂಭವಾದ ಈ ಯೋಜನೆ ನಿರಂತರವಾಗಿ ಸಾಗುತ್ತಿದ್ದು, ನೂರಾರು ರೋಗಿಗಳಿಗೆ ನೆರವಾಗುತ್ತಿದೆ.



"ಸಮಾಜ ನಮಗೆ ಕೊಟ್ಟಿರುವುದನ್ನು ಸಮಾಜಕ್ಕೇ ಮರಳಿ ನೀಡಬೇಕು ಎಂಬ ಉದ್ದೇಶದಿಂದ ಈ ಸೇವೆ ನಿರಂತರವಾಗಿ ಸಾಗುತ್ತಿದೆ."
– ಎಸ್.ಎಂ. ಗಂಗಾಧರಯ್ಯ, ದರ್ಶನ್ ಹೋಟೆಲ್ ಮಾಲೀಕರು

ಸಾಮಾಜಿಕ ಕಳಕಳಿಯಿಂದ ಆರಂಭವಾದ ಈ ಸೇವಾ ಕಾರ್ಯಕ್ಕೆ ಸಾರ್ವಜನಿಕರು ಹಾಗೂ ವಿವಿಧ ಗಣ್ಯರಿಂದ ಮೆಚ್ಚುಗೆ ವ್ಯಕ್ತವಾಗುತ್ತಿದೆ. ರೋಗಿಗಳ ಆರೈಕೆಗೆ ನೆರವಾಗುವ ಉದ್ದೇಶದಿಂದ ನಡೆಯುತ್ತಿರುವ ಈ ಕಾರ್ಯ ಹಲವರಿಗೆ ಮಾದರಿಯಾಗಿದೆ.

ಈ ಸಂದರ್ಭದಲ್ಲಿ ಸಿಎಂ ಶ್ರೀನಿವಾಸ್, ಸರ್ದಾರ್ ಯಮನೂರಪ್ಪ, ಪಾನ್ ಶಾಪ್ ಪುಟ್ಟಣ್ಣ, ಆಟೋ ವೀರೇಶ್, ಮಡಿವಾಳರ ಅಶೋಕ್, ಸೆರಗಾರ್ ಪರಶುರಾಮ್ ಹಾಗೂ ದರ್ಶನ್ ಹೋಟೆಲ್ ಸಿಬ್ಬಂದಿ ಉಪಸ್ಥಿತರಿದ್ದರು.

ಬಿಡುಗಡೆಯಾದ ಕೆಲವೇ ದಿನಗಳಲ್ಲಿ ಲಕ್ಷಾಂತರ ವೀಕ್ಷಣೆ; 'ಕಾಲಘಟ್ಟ' ಚಿತ್ರದ ಹಾಡು ವೈರಲ್

# 'ಸಮಯವು ನಿನ್ನ ಬದುಕಿನ ಮಾಲಿಕ' ಹಾಡಿಗೆ ಜನಮೆಚ್ಚುಗೆ

**■ವಿಜಯಸಾಕ್ಷಿ ಸುದ್ದಿ, ಗದಗ**

ದಿಕ್ಷಿತಾ ಎಂಟರ್‌ಪ್ರೈಸಸ್ ಬೆಂಗಳೂರು ನಿರ್ಮಾಣದ ಬಹುನಿರೀಕ್ಷಿತ ಕನ್ನಡ ಚಿತ್ರ 'ಕಾಲಘಟ್ಟ'ದ ಎರಡನೇ ಲಿರಿಕಲ್ ವಿಡಿಯೊ ಸಾಂಗ್ "ಸಮಯವು ನಿನ್ನ ಬದುಕಿನ ಮಾಲಿಕ, ಕಾಲಕ್ಕೆ ಗೌರವ ಕೊಡಬೇಕು ಜನಕ" ಯೂಟ್ಯೂಬ್‌ನಲ್ಲಿ ಬಿಡುಗಡೆಯಾಗಿ ಭರ್ಜರಿ ಪ್ರತಿಕ್ರಿಯೆ ಪಡೆಯುತ್ತಿದೆ.

ಸಮಾಜಕ್ಕೆ ಉತ್ತಮ ಸಂದೇಶ ನೀಡುವ ಕಥಾಹಂದರ ಹೊಂದಿರುವ ಈ ಚಿತ್ರದ ಹಾಡು ಬಿಡುಗಡೆಯಾದ ಕೆಲವೇ ದಿನಗಳಲ್ಲಿ ಸುಮಾರು 1.80 ಲಕ್ಷಕ್ಕೂ ಹೆಚ್ಚು ವೀಕ್ಷಣೆ ಪಡೆದು ಸಿನಿಪ್ರಿಯರ ಗಮನ ಸೆಳೆದಿದೆ. ಸಮಯದ ಮಹತ್ವವನ್ನು ಅರ್ಥಪೂರ್ಣ ಸಾಹಿತ್ಯದ ಮೂಲಕ ಮನಮುಟ್ಟುವಂತೆ ಹೇಳುವ




ಈ ಹಾಡು ಯುವಜನತೆ ಸೇರಿದಂತೆ ಎಲ್ಲ ವಯೋಮಾನದವರ ಮೆಚ್ಚುಗೆಗೆ ಪಾತ್ರವಾಗಿದೆ.

ಹಾಡಿಗೆ ಋಷಿ ಸಾಹಿತ್ಯ ರಚಿಸಿದ್ದು, ಗಾಯಕ ಮಹೇಶ್ ತಮ್ಮ ಸುಮಧುರ ಕಂಠದ ಮೂಲಕ ಜೀವ ತುಂಬಿದ್ದಾರೆ. ಸಂಗೀತ ನಿರ್ದೇಶಕ ಎ.ಎಂ. ನೀಲ್ ಅವರ ಸಂಗೀತ ಸಂಯೋಜನೆ ಹಾಡಿನ ಪ್ರಮುಖ ಆಕರ್ಷಣೆಯಾಗಿದೆ.

ಚಿತ್ರದಲ್ಲಿ ಅಭಿದಾಸ್ ಹಾಗೂ ನಿತಿಲ್ ನಾಯಕ ಪಾತ್ರಗಳಲ್ಲಿ ಅಭಿನಯಿಸಿದ್ದು, ಋಷಿ ಮತ್ತು ಮೇಘಾ ನಾಯಕಿಯರಾಗಿ ಕಾಣಿಸಿಕೊಂಡಿದ್ದಾರೆ. ಹಿರಿಯ ಕಲಾವಿದರಾದ ಶೋಭರಾಜ್, ಭವ್ಯ, ರಮೇಶ್ ಭಟ್, ಪ್ರಶಾಂತ್ ರವಿ ಹಾಗೂ ಮಂಡ್ಯ ಸೀತಾರಾಮ್ ಪ್ರಮುಖ ಪಾತ್ರಗಳಲ್ಲಿ ಅಭಿನಯಿಸಿದ್ದಾರೆ. ಜೊತೆಗೆ ಹಲವಾರು ರಂಗಭೂಮಿ ಹಾಗೂ ಹಾಸ್ಯ ಕಲಾವಿದರು ಚಿತ್ರದಲ್ಲಿ ನಟಿಸಿದ್ದಾರೆ.

ಚಿತ್ರದ ಛಾಯಾಗ್ರಹಣವನ್ನು ಸದಾಶಿವ ಹಿರೇಮಠ ಹಾಗೂ ರಾಜ್ ಕಡೂರ್, ಸಂಕಲನವನ್ನು ವೆಂಕಿ ಯುಡಿವಿ, ಸಾಹಸ ನಿರ್ದೇಶನವನ್ನು ಮಾಸ್ ಮಾದ ನಿರ್ವಹಿಸಿದ್ದಾರೆ. ಕಥೆ, ಚಿತ್ರಕಥೆ, ಸಂಭಾಷಣೆ ಹಾಗೂ ನಿರ್ದೇಶನದ ಹೊಣೆಯನ್ನು ಕೆ. ಪ್ರಕಾಶ್ ಅಂಬಳೆ ವಹಿಸಿಕೊಂಡಿದ್ದಾರೆ. ಲಯನ್ ಚಿಕ್ಕೇಗೌಡ ಹಾಗೂ ಟಿ.ಸಿ. ತಳಗವಾಡಿ ಚಿತ್ರ ನಿರ್ಮಾಪಕರಾಗಿದ್ದಾರೆ.

ಜೂನ್ 19ರಂದು ರಾಜ್ಯಾದ್ಯಂತ 'ಕಾಲಘಟ್ಟ' ಚಿತ್ರ ಬಿಡುಗಡೆಯಾಗಲಿದ್ದು, ಪ್ರೇಕ್ಷಕರು ಚಿತ್ರಮಂದಿರಗಳಲ್ಲಿ ವೀಕ್ಷಿಸಿ ಪ್ರೋತ್ಸಾಹಿಸಬೇಕು ಎಂದು ನಿರ್ಮಾಪಕರು ಮನವಿ ಮಾಡಿದ್ದಾರೆ.

"ಕಾಲದ ಮಹತ್ವವನ್ನು ಪ್ರತಿಯೊಬ್ಬರಿಗೂ ನೆನಪಿಸುವ ಉದ್ದೇಶದಿಂದ ಈ ಹಾಡನ್ನು ರೂಪಿಸಿದ್ದೇವೆ. ಯುವಜನತೆಗೆ ಹಾಗೂ ಕುಟುಂಬದ ಎಲ್ಲರಿಗೂ ಇದು ಉತ್ತಮ ಸಂದೇಶ ನೀಡಲಿದೆ."
– ಕೆ. ಪ್ರಕಾಶ್ ಅಂಬಳೆ, ನಿರ್ದೇಶಕರು


**ಗದಗ-ಬೆಟಗೇರಿ ನಗರಸಭೆ ಕಾರ್ಯಾಲಯ**
ಜಿಲ್ಲಾ : ಗದಗ, ರಾಜ್ಯ : ಕರ್ನಾಟಕ, ದೂರವಾಣಿ : 08372-259932
ಇಮೇಲ್ : ka.gadag.betageri.cmc@gmail.com

ಸಂಖ್ಯೆ : ಗ.ಬೆ.ನ.ಸ./ತಾಂ.ವಿ./ವ.ಹಿ./ಟೆಂಡರ್/26-27 ದಿನಾಂಕ : 16-06-2026

**ಟೆಂಡರ್ ಪ್ರಕಟಣೆ**

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯ ಪಾರದರ್ಶಕತೆ ಅಧಿನಿಯಮ 1999 - 2000 ರ ಪ್ರಕಾರ ಸ್ಟ್ಯಾಂಡರ್ಡ ಟೆಂಡರ್ ಡಾಕ್ಯೂಮೆಂಟ್ಸ್ ನಿಯಮದನ್ವಯ ಸನ್ **2026-27 ನೇ ಸಾಲಿನ ನಗರಸಭೆ ಅನುದಾನದಲ್ಲಿ ಒಟ್ಟು 04 ಕಾಮಗಾರಿಗಳಿಗೆ ಟೆಂಡರಗಿಟ್ಟ ಮೊತ್ತ ರೂ. 34.44 ಲಕ್ಷಗಳು** ಟೆಂಡರ್ ಆಹ್ವಾನಿಸಿದ್ದು, ಆಸಕ್ತರು ಇ-ಸಂಗ್ರಹಣಾ ವೇದಿಕೆಯಡಿ. **INDENT No. : 1) DMA/2026-27/OW/WORK_INDENT59832, 2) DMA/2026-27/OW/WORK_INDENT59833, 3) DMA/2026-27/OW/WORK_INDENT59834, 4) DMA/2026-27/EL/WORK_INDENT59814,** ಗಳಿಗೆ **http://kppp.karnataka.gv.in** ರಲ್ಲಿ ಸಂಪರ್ಕಿಸಿ ಟೆಂಡರ್ ಸಲ್ಲಿಸಬಹುದಾಗಿದೆ. ಬಿಡ್‌ದಾರರು ಟೆಂಡರ್ ವಿವರಗಳನ್ನು ಕೆ.ಪಿ.ಪಿ. ಪೋರ್ಟಲ್‌ನಲ್ಲಿ ಪಡೆದು, ಸಂಬಂಧಿಸಿದ ಇ.ಎಂ.ಡಿ. ಟೆಂಡರ್ ಫೀಗಳನ್ನು ಇಲೆಕ್ಟ್ರಾನಿಕ್ ಪದ್ಧತಿಯಲ್ಲಿ ತುಂಬಿ ಈ ಕೆಳಗೆ ನಿಗಧಿ ಪಡಿಸಿದ ದಿನಾಂಕದೊಳಗಾಗಿ ಟೆಂಡರ್ ಸಲ್ಲಿಸಬಹುದಾಗಿದೆ.

**1) ಟೆಂಡರ್ ಸಲ್ಲಿಸುವ ಕೊನೆಯ ದಿನಾಂಕ ಮತ್ತು ಸಮಯ : 29-06-2026 ರ ಸಂಜೆ 4.00 ಗಂಟೆಗೆ, 2) ತಾಂತ್ರಿಕ ಬಿಡ್ಡುಗಳನ್ನು ತೆರೆಯುವ ದಿನಾಂಕ ಮತ್ತು ಸಮಯ : 30-06-2026 ರ ಸಂಜೆ 4.30 ಗಂಟೆಗೆ.**

ಸದರಿ ಟೆಂಡರ್‌ಗೆ ಸಂಭಂಧಿಸಿದ ದಿನಾಂಕ ಹಾಗೂ ಇತರೆ ಬದಲಾವಣೆಗಳಾದಲ್ಲಿ ಕೆ.ಪಿ.ಪಿ. ಪೋರ್ಟಲ್‌ನಲ್ಲಿ ಪ್ರಕಟಿಸಲಾಗುವುದು, ಪತ್ರಿಕಾ ಪ್ರಕಟಣೆಯಲ್ಲಿ ಪ್ರಕಟಿಸಲಾಗುವುದಿಲ್ಲ.

ಸಹಿ/- ಪೌರಾಯುಕ್ತರು,
ನಗರಸಭೆ ಗದಗ - ಬೆಟಗೇರಿ.

ಡಿಐಪಿಆರ್/ಗದಗ/124/ಮಣಿಪಾಲ್/2026-27


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka